ಸಂಪುಟ : 9 ಸಂಚಿಕೆ 35 ಪುಟ : 4 ಬೆಲೆ: 3.00 ಬುಧವಾರ ಮಾರ್ಚ್ 6, 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 35 Pages : 4 Price : 3.00 Wednesday March 6 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 6ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ : ವಾರ್ಡ್ ನಂ. 22ರಲ್ಲಿ ಅಪಾರ್ಟಮೆಂಟ್, ದೊಡ್ಡ ಮಸೀದಿಯ ಭಾಗಗಳು, ವಾರ್ಡ್ ನಂ.

7, 5ರಲ್ಲಿ ಪಂಚ ಲಕ್ಷ್ಮೀ ಬಡಾವಣೆಯ 4 ಭಾಗಗಳು, ರಂಗಪ್ಪಜ್ಜನ 2ನೇ ಬ್ಯಾಚ್, ವಾರ್ಡ್ ನಂ. 3, 4ರಲ್ಲಿ ಮಿಷನ್ ಕಂಪೌಂಡ್ ಭಾಗ–1, 2, ಬಣ್ಣದ ನಗರ, ಕುಂಬಾರ ಓಣಿ, ಮಾಧುಸಾ ಮೇಂಬರ್ ಲೈನ್, ರಾಜಾಜಿ ನಗರ ರೋಡ್, ಅಯ್ಯಪ್ಪಜ್ಜನ ಗದ್ದುಗೆ ಲೈನ್, ಹುಯಿಲಗೋಳ ರಸ್ತೆ, ಭಾಗ–1, 2, 3, 4 ಟರ್ನಲ್ ಪೇಟ, 200 ಮನೆ ಲೈನ್, 270 ಮನೆ ಲೈನ್, ಕಣವಿ ಪ್ಲಾಟ್, ಬಿ.ಎಸ್.ಎನ್.ಎಲ್, ಗೌರಿ ಗುಡಿ, ಬ್ಯಾಳಿಯುವರ ಲೈನ್, ಮಾಜಿ ಮೇಂಬರ್ ಲೈನ್, ಸುಣ್ಣದ ಭಟ್ಟಿ ಲೈನ್, ಮಂಜುನಾಥ ನಗರ, ಮಲ್ಲಪ್ಪನ ಬಡಾವಣೆ,

ವಾರ್ಡ್ ನಂ 21, 22, 23ರಲ್ಲಿ ಹಾರೋಗೇರಿ ಭಾಗ–1,ಭಾಗ–2, ಕಗನಳ್ಳಿ ಲೈನ್, ಹೆಬಸೂರ ಲೈನ್, ಹೊನ್ನೆತ್ತಮ್ಮ ಭಾಗ–1,2, ಸೋಮನಗೌಡ್ರ, ಕಮತರ ಪ್ಲಾಟ್, ವಿಭೂತಿ ಓಣಿ, ಲಕ್ಕುಂಡಿ ಅವರ ಲೈನ್, ಮಾನ್ವಿ ಅವರ ಲೈನ್, ಗಣಪತಿ ಗುಡಿ ಲೈನ್, ಅಕ್ಕಿಯವರ ಲೈನ್, ಬಾಳಿಕಾಯಿ ಅವರ ಲೈನ್, ಗೆಳೆಯರ ಬಳಗ ಅವರ ಲೈನ್,

ಗದಗ–ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ನೀರಿನ ಪೂರೈಕೆಯಲ್ಲಿ ಯಾವುದೇ ತೊಂದರೆ ಉಂಟಾದಲ್ಲಿ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ:08372–278504ಗೆ ಕರೆ ಮಾಡಿ ತಮ್ಮ ದೂರನ್ನು ದಾಖಲಿಸಬಹುದಾಗಿದೆ. ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸಲು ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾ.9ರ ಬದಲು ಮಾ.16ರಂದು ‘ರಾಷ್ಟ್ರೀಯ ಲೋಕ ಅದಾಲತ್’

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಉಚ್ಚ ನ್ಯಾಯಾಲಯ ಬೆಂಗಳೂರು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಬೆಂಗಳೂರು ಇವರ ಆದೇಶದನ್ವಯ ಮಾ.9ರಂದು ಆಯೋಜಿಸಿದ್ದ ರಾಷ್ಟ್ರೀಯ ಲೋಕ ಅದಾಲತ್‌ನ್ನು ಮಾ.16ಕ್ಕೆ ಮುಂದೂಡಲಾಗಿದ್ದು, ಸದರಿ ಲೋಕ ಅದಾಲತ್‌ನಲ್ಲಿ ಸಾರ್ವಜನಿಕರು ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಮತ್ತು ವ್ಯಾಜ್ಯಪೂರ್ವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇಚ್ಛಿಸಿದಲ್ಲಿ ಮುಂಚಿತವಾಗಿ ಸಬಂಧಪಟ್ಟ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ತಾಲ್ಲೂಕು ಕಾನೂನು ಸೇವಾ ಸಮಿತಿಗಳನ್ನು ಸಂಪರ್ಕಿಸಿ ಮಾಹಿತಿ ಪಡೆದುಕೊಳ್ಳಬಹುದು.

ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಪ್ರಕರಣ ನಡೆಯುತ್ತಿರುವ ನ್ಯಾಯಾಲಯಕ್ಕೆ ಪ್ರಕರಣ ರಾಜೀ ಮಾಡಿಕೊಳ್ಳುವ ಕುರಿತು ತಿಳಿಸುವ ಮೂಲಕ ಅಥವಾ ಅರ್ಜಿ ಸಲ್ಲಿಸುವ ಮೂಲಕ ಪ್ರಕರಣ ಇತ್ಯರ್ಥಪಡಿಕೊಳ್ಳಲು ಕೋರಲಾಗಿದೆ.

ಪ್ರಕರಣಗಳಿಗೆ ಸಂಬಂಧಪಟ್ಟ ವಕೀಲರು, ಕಕ್ಷಿದಾರರು ಹಾಗೂ ವಿವಿಧ ಇಲಾಖೆಗಳಿಗೆ ಸಂಬಂಧಪಟ್ಟ ಅಧಿಕಾರಿಗಳು, ಇಲಾಖೆಗಳವರು ಮಾ.16ರಂದು ಜರುಗುವ ರಾಷ್ಟ್ರೀಯ ಲೋಕ ಅದಾಲತ್‌ನಲ್ಲಿ ಪಾಲ್ಗೊಂಡು ತಮ್ಮ ವ್ಯಾಜ್ಯಗಳನ್ನು ರಾಜೀ ಸಂಧಾನದ ಮೂಲಕ ಪರಿಹರಿಸಿಕೊಳ್ಳುವಂತೆ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಕೆ.ಗುರುಪ್ರಸಾದ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಕುಡಿಯುವ ನೀರಿಗೆ ಮೊದಲ ಆದ್ಯತೆ । ನಿರ್ಲಕ್ಷ್ಯ ವಹಿಸಿದರೆ ಕಠಿಣಕ್ರಮ: ಸಿಎಂ ಸಿದ್ದರಾಮಯ್ಯ

# ಜನರಿಗೆ ತೊಂದರೆಯಾದರೆ ಜಿಲ್ಲಾಡಳಿತವೇ ಹೊಣೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಕರ್ನಾಟಕದಲ್ಲಿ ಈ ಸಲ ಭಾರೀ ಪ್ರಮಾಣದ ಬರ ಇದ್ದು, ಕುಡಿಯುವ ನೀರಿಗೆ ಮೊದಲ ಆದ್ಯತೆ ನೀಡಬೇಕು. ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿದರೆ ಕಠಿಣ ಕ್ರಮ ಕೈಗೊಳ್ಳಲಾಗುತ್ತದೆ. ಜಿಲ್ಲಾಮಟ್ಟದಿಂದ ಹಿಡಿದು ಗ್ರಾಮ ಮಟ್ಟದವರೆಗೆ ಎಲ್ಲಾ ಅಧಿಕಾರಿಗಳು ಜನರಿಗೆ ತೊಂದರೆ ಆಗದಂತೆ ಎಚ್ಚರಿಕೆಯಿಂದ ಕೆಲಸ ಮಾಡಬೇಕೆಂದು ಮುಖ್ಯಮಂತ್ರಿ ಸಿದ್ದರಾಮಯ್ಯ ನಿರ್ದೇಶಿಸಿದರು.

ಅವರು ಮಂಗಳವಾರ ಬೆಳಿಗ್ಗೆ ಬೆಂಗಳೂರಿನ ಗೃಹ ಕಛೇರಿ ಕೃಷ್ಣಾದಿಂದ ವೀಡಿಯೋ ಸಂವಾದದ ಮೂಲಕ ರಾಜ್ಯದಲ್ಲಿ ಬರದ ಹಿನ್ನೆಲೆಯಲ್ಲಿ ಕುಡಿಯುವ ನೀರು, ಬರ ನಿರ್ವಹಣೆ, ಜಾನುವಾರು ಮೇವು, ಉದ್ಯೋಗ ಹಾಗೂ ಕೃಷಿ ವಿಷಯಗಳ ಕುರಿತು ಜಿಲ್ಲಾ ಉಸ್ತುವಾರಿ ಸಚಿವರು, ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳು, ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ಜರುಗಿಸಿ ಮಾತನಾಡಿದರು.





ಮುಖ್ಯಮಂತ್ರಿಗಳ ವಿಡಿಯೋ ಸಂವಾದದಲ್ಲಿ ಭಾಗವಹಿಸಿದ್ದ ಜಿಲ್ಲಾಧಿಕಾರಿ ದಿವ್ಯ ಪ್ರಭು ಮಾತನಾಡಿ, 2023ರ ಮುಂಗಾರು ವಿಫಲತೆ ಹಿನ್ನೆಲೆಯಲ್ಲಿ ಬೆಳೆ ಹಾನಿಗಾಗಿ ಸರಕಾರ ಪ್ರತಿ ರೈತನಿಗೆ ಬಿಡುಗಡೆ ಮಾಡಿರುವ 2 ಸಾವಿರ ರೂ. ಮಧ್ಯಂತರ ಪರಿಹಾರಧನ ಮಾರ್ಚ್ 5ರವರೆಗೆ ಧಾರವಾಡ ಜಿಲ್ಲೆಯ 1,01,584 ಜನ ರೈತರಿಗೆ ಒಟ್ಟು ರೂ.19.82 ಕೋಟಿ ಹಣ ಜಮೆ ಆಗಿದೆ. ಬಾಕಿ ಉಳಿದ ರೈತರಿಗೂ ಹಂತಹಂತವಾಗಿ ಬೆಳೆಹಾನಿ ಪರಿಹಾರಧನ ವಿತರಣಾ ಪ್ರಕ್ರಿಯೆ ಪ್ರಗತಿಯಲ್ಲಿದೆ ಎಂದು ಹೇಳಿದರು.

ಜನರಿಗೆ ತೊಂದರೆಯಾದರೆ ಆಯಾ ಜಿಲ್ಲೆಯ ಡಿಸಿ, ಎಸಿ ಮತ್ತು ತಹಸೀಲ್ದಾರರನ್ನು ಹೊಣೆಯಾಗಿಸುತ್ತೇನೆ. ಕುಡಿಯುವ ನೀರಿನ ಕೊರತೆ ಆಗಬಾರದು. ಜನ ಕೆಲಸ ಸಿಕ್ಕಿಲ್ಲ ಎಂದು ಗುಳೇ ಹೋಗಬಾರದು. ವಾರಕ್ಕೊಮ್ಮೆ ಜಿಲ್ಲಾಧಿಕಾರಿಗಳು, ಸಿಇಓಗಳು ತಮ್ಮ ಜಿಲ್ಲೆಯ ತಹಸೀಲ್ದಾರ, ಆರ್.ಐ, ವಿ.ಎ ಮತ್ತು ಪಿಡಿಓಗಳೊಂದಿಗೆ ಸಭೆ ಜರುಗಿಸಬೇಕು. ಕ್ಷೇತ್ರ ಮಟ್ಟದ ಸಮಸ್ಯೆಗಳನ್ನು ಸ್ವತಃ ತಿಳಿದು ಕಾರ್ಯಪ್ರವೃತ್ತರಾಗಬೇಕು ಎಂದು ನಿರ್ದೇಶನ ನೀಡಿದರು.

ವಿಪತ್ತನ್ನು ಸಮರ್ಥವಾಗಿ ನಿರ್ವಹಿಸಲು ಜನರ ಸಹಕಾರ, ಅವರ ಪಾಲ್ಗೋಳ್ಳುವಿಕೆ ಮುಖ್ಯ. ಅದಕ್ಕಾಗಿ ಧಾರವಾಡ ಜಿಲ್ಲಾಧಿಕಾರಿ ತಮ್ಮ ಕಚೇರಿಯಲ್ಲಿ ಆರಂಭಿಸಿರುವ ಸಹಾಯವಾಣಿ ಕೇಂದ್ರದಂತೆ ಎಲ್ಲ ಜಿಲ್ಲೆಗಳಲ್ಲಿಯೂ ತಕ್ಷಣ ಜನರ ನೆರವಿಗೆ ಬರಲು ಸಹಾಯವಾಣಿ ಕೇಂದ್ರಗಳನ್ನು ಸ್ಥಾಪಿಸಬೇಕೆಂದು ಮುಖ್ಯಮಂತ್ರಿಗಳು ಸೂಚಿಸಿದರು.

▸▸3ನೇ ಪುಟಕ್ಕೆ

### ಶಿವರಾತ್ರಿ ಜಾತ್ರಾ ಮಹೋತ್ಸವ । ಮುಕ್ತಿಮಂದಿರ ಶ್ರೀಗಳಿಂದ ಭಕ್ತರ ಸಭೆ

# ಜಾತ್ರಾ ಮಹೋತ್ಸವದ ಯಶಸ್ಸಿಗೆ ಕೈಜೋಡಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರದಲ್ಲಿ ಪ್ರತಿ ವರ್ಷದಂತೆ ಶಿವರಾತ್ರಿ ಜಾತ್ರಾ ಮಹೋತ್ಸವ ಅಂಗವಾಗಿ 3 ದಿನಗಳ ಕಾಲ ಶ್ರೀಕ್ಷೇತ್ರದಲ್ಲಿ ಮಹಾಶಿವರಾತ್ರಿ ಜಾತ್ರಾ ಮಹೋತ್ಸವ ಮತ್ತು ವಿಶೇಷ ಧಾರ್ಮಿಕ ಕಾರ್ಯಕ್ರಮಗಳು, ಧರ್ಮಜಾಗೃತಿ ಸಮಾರಂಭ ಜರುಗಲಿದೆ. ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಬೇಕು ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

ಅವರು ಮಂಗಳವಾರ ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದಲ್ಲಿ ಜಾತ್ರಾಮಹೋತ್ಸವದ ಅಂಗವಾಗಿ ಕರೆದಿದ್ದ ಭಕ್ತರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ಲಕ್ಷ್ಮೇಶ್ವರ ಮತ್ತು ಮುಕ್ತಿಮಂದಿರಕ್ಕೆ ಅವಿನಾಭಾವ ಸಂಬಂಧವಿದೆ. ಲಿಂ. ಗಂಗಾಧರ ಜಗದ್ಗುರುಗಳೇ ಲಕ್ಷ್ಮೇಶ್ವರ ನನ್ನ ತವರು ಮನೆ ಎನ್ನುತ್ತಿದ್ದರು. ನಾಡಿನ ಎಲ್ಲ ಭಕ್ತರ ಸಹಾಯ–ಸಹಕಾರದಿಂದ ಶ್ರೀ ಕ್ಷೇತ್ರದಲ್ಲಿ ತ್ರಿಕೋಟಿ ಶಿವಲಿಂಗ ಸ್ಥಾಪನೆಯಾಗಿ ಜಗತ್ಪ್ರಸಿದ್ಧಿ ಪಡೆಯಲಿದೆ. ಶ್ರೀ ಮಠದ ಎಲ್ಲ ಕೈಂಕರ್ಯಗಳಲ್ಲಿ ಪಟ್ಟಣದ ಜನತೆಯ ಸಹಕಾರ ಮುಖ್ಯವಾಗಿದೆ. ರಂಭಾಪುರಿ ಜಗದ್ಗುರುಗಳ ಸಾನಿಧ್ಯದಲ್ಲಿ ನಡೆಯುವ ಶಿವರಾತ್ರಿ ಜಾತ್ರಾಮಹೋತ್ಸವಕ್ಕೆ ಈ ಬಾರಿ ನೊಣವಿನಕೇರಿ ಶ್ರೀಗಳು ಸೇರಿ ಹರಗುರುಚರಮೂರ್ತಿಗಳು, ಜಿಲ್ಲಾ ಉಸ್ತುವಾರಿ ಸಚಿವರಾದ ಹೆಚ್.ಕೆ. ಪಾಟೀಲ, ಸಚಿವೆ ಲಕ್ಷ್ಮೀ ಹೆಬ್ಬಾಳಕರ ಸೇರಿ ಮಂತ್ರಿಗಳು, ಶಾಸಕರು, ನಾಡಿನಾದ್ಯಂತ ಭಕ್ತರು ಜಾತ್ರಾಮಹೋತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ತಿಳಿಸಿದರು.

ಈ ವೇಳೆ ಹಿರಿಯರಾದ ಚಂಬಣ್ಣ ಬಾಳಿಕಾಯಿ, ಸುರೇಶ ರಾಚನಾಯ್ಕರ, ಸಿದ್ದನಗೌಡ ಬಳ್ಳೊಳ್ಳಿ, ಸಿ.ಆರ್. ಲಕ್ಕುಂಡಿಮಠ, ಜಿ.ಎಸ್. ಬಾಳಿಹಳ್ಳಿಮಠ, ವಿಜಯಕುಮಾರ ಹತ್ತಿಕಾಳ, ಮಹೇಶ ಹೊಗೆಸೊಪ್ಪಿನ, ವಿರೂಪಾಕ್ಷ ಆದಿ, ಬಸವರಾಜ ಮೆಣಸಿನಕಾಯಿ, ನಂದೀಶ ಬಂಡಿವಾಡ, ಶೇಖಪ್ಪ ಹುರಕಡ್ಲಿ, ಶಿವಯೋಗಿ ವಡಕಣ್ಣವರ, ಎಸ್.ಜಿ ಹೂವಿನ, ರಮೇಶ ಹೆಬ್ಬಾಳ ಸೇರಿ ಹಲವರಿದ್ದರು.



ಕ್ಷೇತ್ರದಲ್ಲಿನ ಶಿವಲಿಂಗ ದರ್ಶನ, ಪೂಜೆಗಾಗಿ ಬರುವ ಭಕ್ತರ ಸಂಖ್ಯೆ ದಿನೇ ದಿನೇ ಹೆಚ್ಚುತ್ತಿದೆ. ಸುತ್ತಲಿನ ಜಿಲ್ಲೆಗಳ ಭಕ್ತರಷ್ಟೇ ಅಲ್ಲದೇ ಬೆಂಗಳೂರ, ಶಿವಮೊಗ್ಗ, ದಾವಣಗೆರೆ, ತುಮಕೂರ, ಬೆಳಗಾವಿ, ಬಳ್ಳಾರಿ, ಕೊಪ್ಪಳ ಜಿಲ್ಲೆಗಳು ಸೇರಿದಂತೆ ರಾಜ್ಯಾದ್ಯಂತ ಸಾವಿರಾರು ಭಕ್ತರು ಈ ಪುಣ್ಯ ಕ್ಷೇತ್ರಕ್ಕೆ ಆಗಮಿಸುತ್ತಾರೆ. ಜಾತ್ರಾಮಹೋತ್ಸವದ ಯಶಸ್ಸಿಗೆ ಕೈಜೋಡಿಸಬೇಕು ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯರು ಹೇಳಿದರು.

### ವಿಕಸಿತ ಭಾರತ ಸಂಕಲ್ಪಪತ್ರ ಅಭಿಯಾನ ಕಾರ್ಯಕ್ರಮದಲ್ಲಿ ಶಶಿಧರ ದಿಂಡೂರ

# ಕೇಂದ್ರದ ಬಿಜೆಪಿಯಿಂದ ಭರವಸೆ ಈಡೇರಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲೋಕಸಭಾ ಚುನಾವಣೆಯ ಪ್ರಣಾಳಿಕೆ ಮೊದಲು ಬಿಜೆಪಿ ಜನಾಭಿಪ್ರಾಯ ಸಂಗ್ರಹದ ಸಂಕಲ್ಪಪತ್ರ ಮಹಾಅಭಿಯಾನ ಆರಂಭಿಸಿದೆ. ಅದಕ್ಕಾಗಿ ಸಮಾಜದ ರೈತರು, ಮಹಿಳೆಯರು, ಯುವಜನತೆ ಸಹಿತ ಎಲ್ಲ ವರ್ಗದ ಜನರಿಂದ ಅಭಿಮತ ಸಂಗ್ರಹಿಸಲಿದ್ದೇವೆ ಎಂದು ಗದಗ ಜಿಲ್ಲಾ ಬಿಜೆಪಿ ಪ್ರಕೋಷ್ಠಗಳ ಸಂಚಾಲಕ ಶಶಿಧರ ದಿಂಡೂರ ತಿಳಿಸಿದರು.

ಅವರು ಮಂಗಳವಾರ ಪಟ್ಟಣದಲ್ಲಿ ವಿಕಸಿತ ಭಾರತ ಸಂಕಲ್ಪಪತ್ರ ಅಭಿಯಾನ ಕಾರ್ಯಕ್ರಮದಲ್ಲಿ ಮಾತನಾಡಿದರು.

ಬಿಜೆಪಿಯ ಕೇಂದ್ರ ಸರಕಾರವು 2014 ಮತ್ತು 2019ರ ಚುನಾವಣೆ ಸಂದರ್ಭದಲ್ಲಿ ನೀಡಿದ ಬಹುತೇಕ ಎಲ್ಲ ಭರವಸೆಗಳನ್ನು ಈಡೇರಿಸಿದೆ. ಸ್ವಾತಂತ್ರ್ಯೋತ್ಸವದ 100ನೇ ವರ್ಷಾಚರಣೆ ವೇಳೆ 2047ರಲ್ಲಿ ‘ನಮ್ಮ ಭಾರತ ವಿಕಸಿತ ಭಾರತ’ ಎಂಬ ಸಂಕಲ್ಪವನ್ನು ಮೋದಿ ಅವರು ಮುಂದಿಟ್ಟಿದ್ದಾರೆ. ಅದನ್ನು ಸಾಕಾರಗೊಳಿಸಲು ಬರುವ ಚುನಾವಣೆಯ ಪ್ರಣಾಳಿಕೆ ಮೊದಲು ಜನಾಭಿಪ್ರಾಯ ಸಂಗ್ರಹ ಮತ್ತು ಸಂಕಲ್ಪಪತ್ರ ಅಭಿಯಾನಕ್ಕೆ ಸೂಚಿಸಿದ್ದಾರೆ. ಕಳೆದ 75 ವರ್ಷಗಳ ಕಾಲ ದೇಶವನ್ನಾಳಿದ ಪಕ್ಷಗಳ ಚುನಾವಣಾ ಪ್ರಣಾಳಿಕೆಗಳು ಭರವಸೆ ಪುಸ್ತಕ ಆಗಿದ್ದವು. ಆದರೆ ನರೇಂದ್ರ ಮೋದಿ ಎಂತಹ ಸಂಕಷ್ಟದ ನಡುವೆಯೂ ಕೊಟ್ಟ ಬಹುತೇಕ ಭರವಸೆ ಈಡೇಸುವ ಕಾರ್ಯ ಮಾಡಿದ್ದಾರೆ ಎಂದರು.

ಜಿಲ್ಲಾ ಸಹ ಸಂಚಾಲಕ ರಮೇಶ ಸಜ್ಜಲಗಾರ, ಬಿಜೆಪಿ ಶಿರಹಟ್ಟಿ ಮಂಡಳ ಅಧ್ಯಕ್ಷ ಸುನೀಲ ಮಹಾಂತಶೆಟ್ಟರ ಮಾತನಾಡಿ, ದೇಶದ ಸಾಮಾನ್ಯ ವರ್ಗ, ರೈತರು, ಕೂಲಿಕಾರರು ಎದುರಿಸುತ್ತಿರುವ ಸಮಸ್ಯೆ, ಬೇಕು–ಬೇಡಿಕೆಗಳೇನು ಎಂಬ ಜನಾಭಿಪ್ರಾಯ ಪಡೆದು ಈಡೇರಿಸುವ ಸಂಕಲ್ಪದೊಂದಿಗೆ ಬಿಜೆಪಿ ಚುನಾವಣೆಗೆ ಮುಂದಾಗಲಿದೆ. ಜನರೇ ಅಭಿಪ್ರಾಯ ತಿಳಿಸುವ ಪ್ರಣಾಳಿಕೆ ರೂಪಿತವಾಗಬೇಕು ಎನ್ನುವುದು ಮೋದಿಯವರ ಅವರ ಅಭಿಪ್ರಾಯ. ಈ ಹಿನ್ನಲೆ ಬಿಜೆಪಿ ‘ಸಂಕಲ್ಪ ಪತ್ರ’ ಅಭಿಯಾನ ಆರಂಭಿಸಿದೆ. ಸಮಾಜದ ಕಟ್ಟಕಡೆಯ ಪ್ರಜೆಗಳ ಅಭಿಪ್ರಾಯ ಕ್ರೋಢೀಕರಿಸಿ ವಿಕಸಿತ ಭಾರತ ಸಂಕಲ್ಪ ಯಾತ್ರೆ ಅಭಿಯಾನ ಆಯೋಜಿಸಲಾಗಿದೆ ಎಂದು ಹೇಳಿದರು.

ಈ ವೇಳೆ ಪಕ್ಷದ ಯುವ ಮುಖಂಡರಾದ ಗಂಗಾಧರ ಮೆಣಸಿನಕಾಯಿ, ದುಂಡೇಶ ಕೊಟಗಿ, ಸಂತೋಷ ಜಾವೂರ, ಶಕ್ತಿ ಕತ್ತಿ, ವಿಜಯ ಕುಂಬಾರ, ಭೀಮಣ್ಣ ಯಂಗಾಡಿ, ವಿಶಾಲ ಬಟಗುರ್ಕಿ, ವಿರೇಶ ಸಾಸಲವಾಡ, ಆಕಾಶ ಸೌದತ್ತಿ ಮುಂತಾದವರಿದ್ದರು.



ಶೇ.33 ಮಹಿಳಾ ಮೀಸಲು, ಗರೀಬ ಕಲ್ಯಾಣ ಯೋಜನೆ, ಆಯುಷ್ಮಾನ ಆರೋಗ್ಯ ಯೋಜನೆ, ವಸತಿ ಯೋಜನೆ, ಪ್ರತಿ ಮನೆಗೆ ಕುಡಿಯುವ ನೀರು, ಉಜ್ವಲ್ ಯೋಜನೆ, ಸ್ವಚ್ಛ ಭಾರತ, ಬೆಳಕು, ಔಷಧೋಪಚಾರ, ಪಿಎಂ ಕಿಸಾನ್, ರಸಗೊಬ್ಬರ ಸಬ್ಸಿಡಿ, ಬೀದಿ ಬದಿ ವ್ಯಾಪಾರಸ್ಥರ ಕಲ್ಯಾಣ, 370 ಕಲಂ ರದ್ದುಪಡಿಸಿರುವುದು, ದಿನಕ್ಕೆ 37 ಕಿಲೋಮೀಟರ್ ಹೆದ್ದಾರಿ ನಿರ್ಮಾಣ, ರಾಮಮಂದಿರ ನಿರ್ಮಾಣದಂತಹ ಮಹೋನ್ನತ ಕಾರ್ಯಗಳೊಂದಿಗೆ ವಿಶ್ವದ ಆರ್ಥಿಕತೆಯಲ್ಲಿ ದೇಶ 5ನೇ ಸ್ಥಾನಕ್ಕೇರಿದೆ. ಸಂಕಲ್ಪಪತ್ರ 9090902024 ಮಿಸ್‌ಕಾಲ್ ಮಾಡಿ ಸಲಹಾ ಪೆಟ್ಟಿಗೆ ಮುಖಾಂತರ ಜನರ ಅಭಿಪ್ರಾಯ ತಿಳಿಸಬಹುದು ಎಂದು ಶಶಿಧರ ದಿಂಡೂರ ಹೇಳಿದರು.

## ವಾ.ಕ.ರ.ಸಾ ಸಂಸ್ಥೆಗೆ ರಾಷ್ಟ್ರ ಮಟ್ಟದ ಪ್ರಶಸ್ತಿ

■ವಿಜಯಸಾಕ್ಷಿ ಸುದ್ದಿ, ಗದಗ



ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯು ‘ರಸ್ತೆ ಸಾರಿಗೆ ಸುರಕ್ಷತೆ ಪದ್ಧತಿಯ ಅನುಷ್ಠಾನ’ಗೊಳಿಸಿದ್ದಕ್ಕಾಗಿ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಒಕ್ಕೂಟದ ( ಎಎಸ್‌ಆರ್‌ಟಿಯು) ರಾಷ್ಟ್ರಮಟ್ಟದ ಪ್ರಶಸ್ತಿ ದೊರೆತಿದೆ. ಸದರಿ ಒಕ್ಕೂಟದ ಎಎಸ್‌ಆರ್‌ಟಿಯ ವ್ಯಾಪ್ತಿಯಲ್ಲಿ ದೇಶದ 62 ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳು ಸದಸ್ಯತ್ವವನ್ನು ಹೊಂದಿವೆ. ಒಕ್ಕೂಟವು 13ನೇ ಆಗಸ್ಟ್ 1965ರಲ್ಲಿ ಅಸ್ತಿತ್ವಕ್ಕೆ ಬಂದಿದ್ದು, ಭಾರತ ಸರ್ಕಾರದ ರಸ್ತೆ ಸಾರಿಗೆ ಹಾಗೂ ಹೆದ್ದಾರಿ ಸಚಿವಾಲಯದ ನಿರ್ದೇಶನದ ಅನುಸಾರ ಕಾರ್ಯ ನಿರ್ವಹಿಸುತ್ತದೆ.

2022–23ನೇ ಸಾಲಿನಲ್ಲಿ ಬೆಸ್ಟ್ ರೋಡ್ ಸೇಫ್ಟಿ ಪ್ರಾಕ್ಟೀಸಸ್ ವಿಭಾಗದಡಿಯಲ್ಲಿ ಸಂಸ್ಥೆಗೆ ರಾಷ್ಟ್ರೀಯ ಪ್ರಶಸ್ತಿ ಘೋಷಿಸಿದ್ದು, ಇದೇ ಮಾರ್ಚ್ 15ರಂದು ದೆಹಲಿಯ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಗಳ ಒಕ್ಕೂಟದ 64ನೇ ವಾರ್ಷಿಕ ಸಮಾವೇಶದಲ್ಲಿ ಪ್ರಶಸ್ತಿ ಪ್ರದಾನ ಮಾಡಲಾಗುತ್ತಿದೆ. ಸಂಸ್ಥೆಯ ಎಲ್ಲ ಸಿಬ್ಬಂದಿ ಹಾಗೂ ಅಧಿಕಾರಿಗಳ ಸಂಯೋಜಿತ ಯೋಜನೆ ಮತ್ತು ಪರಿಶ್ರಮದಿಂದ ಈ ಪ್ರಶಸ್ತಿ ಲಭಿಸಿದ್ದು, ಸಂಸ್ಥೆಯ ಎಲ್ಲ ವರ್ಗದ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ವ್ಯವಸ್ಥಾಪಕ ನಿರ್ದೇಶಕ ಭರತ್ ಎಸ್, ಭಾ.ಆ.ಸೇ. ಅಭಿನಂದನೆ ಸಲ್ಲಿಸಿದ್ದಾರೆ.

## ಕುಡಿಯುವ ನೀರು ಪೂರೈಕೆ ದೂರು ದಾಖಲಿಸಲು ಸಹಾಯವಾಣಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ನಗರಸಭೆಯ ವ್ಯಾಪ್ತಿಯಲ್ಲಿ ನೀರಿನ ಪೂರೈಕೆಯಲ್ಲಿ ಯಾವುದೇ ತೊಂದ–ರೆ ಉಂಟಾದಲ್ಲಿ ಕಾರ್ಯಾಲಯದ ಸಹಾಯವಾಣಿ ಸಂಖ್ಯೆ: 08372–278504ಗೆ ಕರೆ ಮಾಡಿ ತಮ್ಮ ದೂರು ದಾಖಲಿಸಬಹುದಾಗಿದೆ ಎಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ಗದಗ ಜಿಲ್ಲಾ ಪ್ರವಾಸ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅವರ ಪರಿಷ್ಕೃತ ಜಿಲ್ಲಾ ಪ್ರವಾಸ ಕಾರ್ಯಕ್ರಮ ಇಂತಿದೆ.

ಮಾರ್ಚ್ 6ರಂದು ಬೆಳಿಗ್ಗೆ 10.40 ಗಂಟೆಗೆ ಹುಬ್ಬಳ್ಳಿಯಿಂದ ಗದುಗಿನ ಸರ್ಕ್ಯೂಟ್ ಹೌಲ್‌ಗೆ ಆಗಮಿಸುವರು. ಬೆಳಿಗ್ಗೆ 11.15 ಗಂಟೆಗೆ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯಕ್ಕೆ ಆಗಮಿಸಿ ಬೆಳಿಗ್ಗೆ 11.30 ಗಂಟೆಗೆ ವಿಶ್ವವಿದ್ಯಾಲಯದ 4ನೇ ಘಟಿಕೋತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವರು. ಮಧ್ಯಾಹ್ನ 1.30 ಗಂಟೆಗೆ ಗದಗನ ಸರ್ಕ್ಯೂಟ್ ಹೌಸ್‌ಗೆ ಆಗಮಿಸಿ ಅಲ್ಲಿಂದ ಮಧ್ಯಾಹ್ನ 2.30 ಗಂಟೆಗೆ ಹುಬ್ಬಳ್ಳಿಗೆ ಪ್ರಯಾಣ ಮಾಡುವರು ಎಂದು ರಾಜ್ಯಪಾಲರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಸಚಿವ ಪ್ರಿಯಾಂಕ್ ಖರ್ಗೆ ಅವರ ಪರಿಷ್ಕೃತ ಪ್ರವಾಸ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರ ಪರಿಷ್ಕೃತ ಗದಗ ಜಿಲ್ಲಾ ಪ್ರವಾಸ ಕಾರ್ಯಕ್ರಮ ಇಂತಿದೆ.

ಮಾರ್ಚ್ 6 ರಂದು ಬೆಳಿಗ್ಗೆ 8.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮೂಲಕ ಗದಗಿಗೆ ಆಗಮಿಸುವರು. ಬೆಳಿಗ್ಗೆ 11 ಗಂಟೆಗೆ ನಾಗಾವಿಯ ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದ ಆವರಣದಲ್ಲಿ ಆಡಿಟೋರಿಯಂ ಕೌಶಲ್ಯ ವಿಕಾಸ ಭವನದಲ್ಲಿ ವಿಶ್ವವಿದ್ಯಾಲಯದ 4ನೇ ವಾರ್ಷಿಕ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸುವರು. ಮಧ್ಯಾಹ್ನ 2 ರಿಂದ ಸಂಜೆ 5 ರವರೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಇಲಾಖಾ ಪ್ರಗತಿ ಪರಿಶೀಲನೆ ನಡೆಸುವರು. ಸಂಜೆ 5ಗಂಟೆಗೆ ಗದಗಿನಿಂದ ಹುಬ್ಬಳ್ಳಿಗೆ ರಸ್ತೆ ಮೂಲಕ ಪ್ರಯಾಣಿಸುವರು ಎಂದು ಸಚಿವರ ಕಾರ್ಯಾಲಯದ ಪ್ರಕಟಣೆ ತಿಳಿಸಿದೆ.

## ಸಂಪಾದಕೀಯ

# ಅಂತರ್ಜಲ ಭಾರೀ ಇಳಿಕೆ ಬೋರ್‌ವೆಲ್ ದರ ಏರಿಕೆ

ರಾಜ್ಯದಲ್ಲಿ ತೀವ್ರ ಬರದಿಂದಾಗಿ ರೈತರು ಕಂಗೆಟ್ಟಿದ್ದಾರೆ. ಕುಡಿಯುವ ನೀರು, ಮೇವು ಇಲ್ಲದೆ ಜನ ಜಾನುವಾರು ಸಂಕಷ್ಟಕ್ಕೆ ತುತ್ತಾಗಿದ್ದು, ಜಾನುವಾರುಗಳಿಗೆ ಮೇವು ಸಿಗದೇ ರೈತರು, ಕಡಿಮೆ ಬೆಲೆಗೆ ತಮ್ಮ ರಾಸುಗಳನ್ನ ಮಾರಾಟ ಮಾಡುತ್ತಿದ್ದಾರೆ. ಮಾರುಕಟ್ಟೆಯಲ್ಲಿ ಸೂಕ್ತ ಬೆಲೆ ಇಲ್ಲದೆ ಬಿತ್ತಿ ಬೆಳೆದ ಉತ್ಪನ್ನಗಳನ್ನು ರಸ್ತೆಗೆ ಚೆಲ್ಲುವಂತಾಗಿದೆ.

ಇವೆಲ್ಲದರ ಮಧ್ಯೆ, ನೀರಾವರಿ ಮೂಲಕ ಅನ್ನ ಬೆಳೆಯುವ ರೈತನ ಕನಸಿಗೆ ತಣ್ಣೀರು ಬಿದ್ದಂತಾಗಿದೆ. ಉತ್ತರ ಕರ್ನಾಟಕ ಭಾಗದಲ್ಲಿ ಸದ್ದಿಲ್ಲದೆ ಬೋರವೆಲ್ ಕೊರೆಯಿಸುವ ದರ ಹೆಚ್ಚಳವಾಗಿದೆ. ಬರದಲ್ಲೂ ಕೃಷಿ ಕೈಗೊಳ್ಳಬೇಕೆಂಬ ಕನಸು ದರ ಏರಿಕೆಯಿಂದ ಮತ್ತೆ ಕನಸಾಗಿಯೇ ಉಳಿಯಲಿದೆ.

ಉತ್ತರ ಕರ್ನಾಟಕ ಭಾಗದಲ್ಲಿ ಅಂತರ್ಜಲ ಮಟ್ಟ ಗಣನೀಯವಾಗಿ ಇಳಿಕೆಯಾಗಿದೆ. ಕಳೆದ ವರ್ಷ ಸರಾಸರಿ 6.5 ಮೀಟರ್ ನಷ್ಟಿದ್ದ ಅಂತರ್ಜಲ ಮಟ್ಟ, ಈ ವರ್ಷ 13.8ಕ್ಕೆ ಕುಸಿತ ಕಂಡಿದೆ.

ಇನ್ನು ಉತ್ತರ ಕರ್ನಾಟಕ ಭಾಗದಲ್ಲಿ 200–300 ಮೀಟರ್ ಆಳ ಕೊರೆದ ನಂತರ ಒಂದಷ್ಟು ನೀರು ಲಭ್ಯವಾಗುತ್ತದೆ. ಸದ್ಯ ಅಂತರ್ಜಲ ಕುಸಿತ ಆಗಿರುವುದರಿಂದ ಮತ್ತಷ್ಟು ಆಳವಾಗಿ ಕೊರೆಯಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದೆ.

ಆದರೆ ಬೋರವೆಲ್ ಕೊರೆಯುವ ಗಾಡಿಗಳ ಮಾಲೀಕರು ಪ್ರತಿ ಒಂದು ಅಡಿಗೆ 25 ರುಪಾಯಿ ದಿಂದ ರೂ.50 ದರ ಏರಿಕೆ ಮಾಡಿದ್ದಾರೆ. ಬೋರವೆಲ್ ಕೊರೆಯುವ ಗಾಡಿಗಳ ಮಾಲೀಕರು ಒಟ್ಟಾಗಿ ಈ ನಿರ್ಧಾರಕ್ಕೆ ಬಂದಿರುವುದು ರೈತರಿಗೆ ಆಘಾತ ತಂದಿದೆ.

ಸದ್ಯ ಪೆಟ್ರೋಲ್, ಡೀಸೆಲ್ ಸಹಿತ ಬೋರ್‌ವೆಲ್ ಕೊರೆಯುವುದಕ್ಕೆ ಸಂಬಂಧಿಸಿದಂತೆ ಯಾವುದೇ ಬೆಲೆ ಏರಿಕೆ ಆಗದಿದ್ದರೂ, ಬೋರ್‌ವೆಲ್ ಕೊರಸುವುದರ ದರ ಹೆಚ್ಚಿಸಿರುವುದು ರೈತರಿಗೆ ಆಘಾತ ತಂದಿದೆ. ಸರ್ಕಾರ ಗಂಗಾ ಕಲ್ಯಾಣ ಯೋಜನೆ ಮೂಲಕ ಕೆಲ ರೈತರಿಗೆ ಅನುಕೂಲ ಕಲ್ಪಿಸಿದೆ. ಆದರೆ ದೊಡ್ಡ ರೈತರು ಹಣ ಖರ್ಚು ಮಾಡಿ ಬೋರವೆಲ್ ಕೊರಯಿಸುವುದು ಅನಿವಾರ್ಯ. ಅಂತ ರೈತರಿಗೆ ಬೆಲೆ ಏರಿಕೆ ಬಿಸಿ ಮುಟ್ಟಿದೆ.

# ರೈತರ ಸಾಲ ವಸೂಲಾತಿ ತಕ್ಷಣ ನಿಲ್ಲಲಿ



■ವಿಜಯಸಾಕ್ಷಿ ಸುದ್ದಿ, ಗದಗ

ರೈತರ ಸಾಲ ಹಾಗೂ ರೈತರು ಮಾಡಿರುವ ಉಪಕರಣಗಳ ಸಾಲ, ಅದರೊಂದಿಗೆ ಟ್ರ್ಯಾಕ್ಟರ್ ಸಾಲ ಮನ್ನಾ ಮಾಡಬೇಕು ಅಥವಾ ಸಾಲದ ವಸೂಲಾತಿಯನ್ನು ನಿಲ್ಲಿಸಬೇಕೆಂದು ಜಾತ್ಯತೀತ ಜನತಾದಳದ ಪರವಾಗಿ ಈ ಹಿಂದೆ ಪಾದಯಾತ್ರೆ ಮಾಡಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿತ್ತು. ಅದರ ಬಗ್ಗೆ ರಾಜ್ಯ ಸರ್ಕಾರವು ಕುರುಡುತನ ಹಾಗೂ ಕಿವುಡುತನ ಎರಡನ್ನು ಪ್ರದರ್ಶನ ಮಾಡಿದೆ ಎಂದು ಜೆಡಿಎಸ್ ರಾಜ್ಯದ ವಕ್ತಾರರಾದ ವೆಂಕನಗೌಡ ಗೋವಿಂದಗೌಡ್ರ ಆಕೇಪಿಸಿದ್ದಾರೆ.

ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಲಕ್ಷ್ಮೇಶ್ವರ ತಾಲೂಕಿನ ಗೋನಾಳ ಗ್ರಾಮದ ತೇಲಿ ಕುಟುಂಬದ ನಾಲ್ವರು ಸದಸ್ಯರು ಟ್ರಾಕ್ಟರ್ ಸಾಲ ಕಟ್ಟಲಾಗದೆ ಒತ್ತಡಕ್ಕೆ ಒಳಗಾಗಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಇದಕ್ಕೆ ರಾಜ್ಯ ಸರ್ಕಾರವೇ ಹೊಣೆ ಹೊರಬೇಕಾಗುತ್ತದೆ. ಈಗಾಗಲೇ 700 ರೈತರು ಹತ್ತು ತಿಂಗಳಲ್ಲಿ ಆತ್ಮಹತ್ಯೆ ಮಾಡಿಕೊಂಡಿದ್ದು, ಇದು ಸರಕಾರದ ರೈತರ ವಿರೋಧಿ ಧೋರಣೆಯಿಂದ ಸಂಭವಿಸಿದೆ ಎಂದಿದ್ದಾರೆ.

ಇನ್ನಾದರೂ ಸರಕಾರ ಎಚ್ಚೆತ್ತು ರೈತರ ನೆರವಿಗೆ ಧಾವಿಸಬೇಕು. ಸಾಲ ಮನ್ನಾ ಆಗದಿದ್ದರೂ ಕೂಡ ಸಾಲ ವಸೂಲಾತಿಯನ್ನು ನಿಲ್ಲಿಸಬೇಕು. ಈಗ ರಾಜ ಸರ್ಕಾರ ತಕ್ಷಣ ಕಾರ್ಯಪ್ರವೃತ್ತರಾಗಿ ರೈತರ ಆತ್ಮಹತ್ಯೆಯನ್ನು ತಡೆಯಬೇಕೆಂದು ರಾಜ್ಯ ಸರಕಾರವನ್ನು ಆಗ್ರಹಿಸಿದ್ದಾರೆ.

## ಲಿಂ. ಶ್ರೀ ಕುಮಾರ ಮಹಾ ಶಿವಯೋಗಿಗಳವರ 94ನೆ ಪುಣ್ಯ ಸ್ಮರಣೋತ್ಸವ

# ಕುಮಾರ ಶಿವಯೋಗಿಗಳ ಸಮಾಜ ಸೇವೆ ಅನನ್ಯ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಶಿವಯೋಗ ಮಂದಿರದಲ್ಲಿ ಮಠಗಳನ್ನು ನಿರ್ವಹಿಸುಲು ಸನ್ನದ್ಧರಾಗುವ ವಟುಗಳನ್ನು ತಯಾರಿಸುವ ಗುರುಕುಲವನ್ನು ಸ್ಥಾಪಿಸಿ ಈ ನಾಡಿಗೆ ಕಲ್ಯಾಣವನ್ನುಂಟುಮಾಡಿದವರು ಹಾನಗಲ್ಲ ಗುರುಕುಮಾರ ಶಿವಯೋಗಿಗಳು. ಅವರ ದೂರದೃಷ್ಟಿಯ ಫಲವಿಂದು ಹೆಮ್ಮರವಾಗಿ ಬೆಳೆದು, ನಾಡಿನಾದ್ಯಂತ ಅನೇಕ ಹರ ಗುರು ಚರ ಮೂರ್ತಿಗಳನ್ನು ಕಾಣುವಲ್ಲಿ ಅವರ ಸೇವೆ ಅಪಾರವಾಗಿದೆ. ಕುಮಾರ ಶಿವಯೋಗಿಗಳು ಈ ನಾಡಿಗೆ, ಸಮಾಜಕ್ಕೆ ಸಲ್ಲಿಸಿರುವ ಸೇವೆ ಅನನ್ಯವಾದುದು ಎಂದು ಹಾಲಕೆರೆ ಸಂಸ್ಥಾನ ಮಠದ ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ಹೇಳಿದರು.

ಸಮೀಪದ ನಿಡಗುಂದಿಕೊಪ್ಪದ ಶಾಖಾ ಶಿವಯೋಗ ಮಂದಿರದಲ್ಲಿ ಸೋಮವಾರ ಜರುಗಿದ ಲಿಂ. ಶ್ರೀ ಕುಮಾರ ಮಹಾ ಶಿವಯೋಗಿಗಳವರ 94ನೆ ಪುಣ್ಯ ಸ್ಮರಣೋತ್ಸವ ಹಾಗೂ ರಥೋತ್ಸವದ ನಂತರ ನಡೆದ ಧಾರ್ಮಿಕ ಸಭೆಯ ಪಾವನ ಸನ್ನಿಧಾನವನ್ನು ವಹಿಸಿ ಅವರು ಆಶೀರ್ವಚನ ನೀಡಿದರು.

ಹಾನಗಲ್ಲ ಕುಮಾರ ಶಿವಯೋಗಿಗಳು, ಹಾವೇರಿಯ ಶಿವಬಸವ ಮಹಾಸ್ವಾಮಿಗಳವರು ಶಿವಯೋಗ ಮಂದಿರದ ಶಾಖಾ ಮಠವನ್ನು ನಿಡಗುಂದಿಕೊಪ್ಪದಲ್ಲಿ ಸ್ಥಾಪಿಸಿ ಈ ಭಾಗದ ಜನರಿಗೆ ಆರೋಗ್ಯ ದಾಸೋಹ



ನೀಡುವ ಕಾರ್ಯಕ್ಕೆ ಇಲ್ಲಿನ ಸ್ವಾಮಿಗಳನ್ನು ನೇಮಿಸಿದರು. ಅವರ ಅಪೇಕ್ಷೆಯಂತೆ ಶ್ರೀಮಠದ ಚನ್ನಬಸವ ಮಹಾಸ್ವಾಮಿಗಳು, ಶಿವಬಸವ ಮಹಾಸ್ವಾಮಿಗಳು ಆರೋಗ್ಯ ದಾಸೋಹದ ಕಾರ್ಯವನ್ನು ಅನವರತ ಮಾಡುತ್ತ ಬಂದರು.

ರಾಜ್ಯದಲ್ಲಿರುವ ಬಹುತೇಕ ಮಠಗಳು ಅನ್ನ ದಾಸೋಹ, ಶೈಕ್ಷಣಿಕ ದಾಸೋಹ ಮುಂತಾದವುಗಳನ್ನು ಮಾಡುತ್ತ ಬಂದಿವೆ. ಆದರೆ ಭಕ್ತ ಜನತೆಗೆ ಅತಿ ಅವಶ್ಯಕವಾದ ಆರೋಗ್ಯ ದಾಸೋಹವನ್ನು ನೀಡುವ ಮಠ ಅದು ಯಾವುದಾದರೂ ಇದ್ದರೆ ಅದು ನಿಡಗುಂದಿಕೊಪ್ಪದ ಮಠವೊಂದೇ ಎಂದು ತಿಳಿಸಿದ ಶ್ರೀಗಳು, ಈ ಹಿಂದಿನ ಶ್ರೀಗಳು ಕೈಗೊಂಡ ಆರೋಗ್ಯ ದಾಸೋಹವನ್ನು ಇಂದಿನ ಪೀಠಾಧಿಪತಿಗಳಾಗಿರುವ ಅಭಿನವ ಚನ್ನಬಸವ ಮಹಾಸ್ವಾಮಿಗಳೂ ಮುಂದುವರೆಸಿಕೊಂಡು ಬರುತ್ತಿರುವುದು ಶ್ಲಾಘನೀಯ ಎಂದರು.

> ಈಗೀಗ ಆಯುರ್ವೇದಕ್ಕೆ ಹೆಚ್ಚಿನ ಮಹತ್ವ ಸಿಗುತ್ತಿದೆ. ಇಂತಹ ಸಂದರ್ಭದಲ್ಲಿ ಶ್ರೀಮಠದಿಂದ ಆಯುರ್ವೇದ ಕುರಿತು ಒಂದು ಸಂಶೋಧನಾ ಕೇಂದ್ರವೇನಾದರೂ ಪ್ರಾರಂಭಗೊಂಡರೆ ಅದು ಬಹಳಷ್ಟು ಜನರಿಗೆ ಉಪಯೋಗವಾಗುತ್ತದೆ. ಈ ದಿಶೆಯಲ್ಲಿ ಶ್ರೀಮಠದ ಈಗಿನ ಸ್ವಾಮಿಗಳು ಯೋಚನೆ ಮಾಡಿ ಕಾರ್ಯ ಪ್ರವೃತ್ತರಾಗಲಿ ಎಂದು ಶ್ರೀ ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು ನುಡಿದರು.

ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ಆಶೀರ್ವಚನ ನೀಡಿ, ಶ್ರೀ ಮಠದಲ್ಲಿ ಹಿಂದಿನಿಂದಲೂ ನಡೆದು ಬಂದಿರುವ ಆರೋಗ್ಯ ದಾಸೋಹ ಎಂದಿಗೂ ಮುಂದುವರೆಯುತ್ತದೆ. ಈ ಮಠದ ಸದ್ಭಕ್ತರು ಮಠದ ಮೇಲೆ ಅಪಾರ ಶ್ರದ್ಧೆ–ಭಕ್ತಿಯನ್ನಿರಿಸಿದ್ದಾರೆ. ಅವರೆಲ್ಲರ ಸಹಾಯ–ಸಹಕಾರಗಳಿಂದ ಶ್ರೀಮಠವು ಏಳಿಗೆಯ ಹಾದಿಯಲ್ಲಿ ಮುನ್ನಡೆಯುತ್ತಿದೆ. ಮಠದ ಜಾತ್ರಾ ಮಹೋತ್ಸವದ ನಿಮಿತ್ಯ ಎರಡು ದಿನಗಳ ಕಾಲ ನಡೆದ ಎಲ್ಲ ಸಭೆ, ಸಮಾರಂಭ, ಪ್ರಸಾದ ಮತ್ತಿತರ ಕಾರ್ಯಗಳಿಗೆ ಭಕ್ತರು ನೀಡಿದ ಸಹಕಾರವನ್ನು ನಾವೆಂದಿಗೂ ಮರೆಯುವಂತಿಲ್ಲ. ಈ ಶ್ರದ್ಧೆ ಭಕ್ತರಲ್ಲಿ ಎಂದಿಗೂ ಹೀಗೇ ಇರಲಿ ಎಂದು ನಾವು ಶ್ರೀ ಚನ್ನಬಸವೇಶನಲ್ಲಿ ಪ್ರಾರ್ಥಿಸುತ್ತೇವೆ ಎಂದರು. ನಂತರ ಅಭಿನವ ಚನ್ನಬಸವ ಮಹಾಸ್ವಾಮಿಗಳವರಿಗೆ ತುಲಾಭಾರ ಸೇವೆ ನಡೆಯಿತು.

ಸಮಾರಂಭದಲ್ಲಿ ಪ್ರಭುಗೌಡ ಪಾಟೀಲ, ಡಾ. ಅಂದಾನಗೌಡ ಪಾಟೀಲ, ನರೇಗಲ್ಲ ಬ್ಲಾಕ್ ಕಮಿಟಿ ಅಧ್ಯಕ್ಷ ಶರಣಪ್ಪ ಬೆಟಗೇರಿ, ನರೇಗಲ್ಲ ಬ್ಲಾಕ್ ಕಾಂಗ್ರೆಸ್ ಮಹಿಳಾ ಘಟಕದ ಅಧ್ಯಕ್ಷೆ ಮಂಜುಳಾ ರೇವಡಿ ಮುಂತಾದ ಗಣ್ಯರನ್ನು ಶ್ರೀಗಳು ಆಶೀರ್ವದಿಸಿ, ಸನ್ಮಾನಿಸಿದರು. ಕೊಪ್ಪಳದ ಸಂಗೀತಗಾರ್ತಿ ವಿಶಾಲಾಕ್ಷಿ ಹಿರೇಮಠ ಸಂಗೀತ ಸೇವೆ ನೀಡಿದರು.

ವೇದಿಕೆಯ ಮೇಲೆ ಅಂಕಲಗಿಯ ಅಡವಿ ಸಿದ್ಧೇಶ್ವರ ಮಹಾಸ್ವಾಮಿಗಳು, ಗದಗ–ಹೊಸಪೇಟೆಯ ಶ್ರೀ ಚಂದ್ರಶೇಖರ ದೇವರು, ಲಿಂಗನಾಯಕನ ಹಳ್ಳಿಯ ಶ್ರೀ ನಿರಂಜನ ದೇವರು ಇನ್ನೂ ಮುಂತಾದ ಹರ–ಗುರು–ಚರ ಮೂರ್ತಿಗಳು ಉಪಸ್ಥಿತರಿದ್ದರು. ಶಿಕ್ಷಕ ಜಿ.ಎ. ಬೆಲ್ಲದ ನಿರ್ವಹಿಸಿದರು.

# ಡಾ. ಕಾವೇರಿ ಗುಳಗಣ್ಣವರಿಗೆ 9ನೇ ರ‍್ಯಾಂಕ್

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಸರಕಾರಿ ಪಿಯು ಕಾಲೇಜಿನಲ್ಲಿ ಉಪನ್ಯಾಸಕರಾಗಿರುವ ಎಸ್.ಸಿ. ಗುಳಗಣ್ಣವರ ಅವರ ಪುತ್ರಿ ಡಾ. ಕಾವೇರಿ ಗುಳಗಣ್ಣವರ ವಿಶ್ವವಿದ್ಯಾಲಯ ಮಟ್ಟದಲ್ಲಿ 4ನೇ ವರ್ಷದ ಬಿಎಎಂಎಸ್ ವೃತ್ತಿಪರ ಆಯುರ್ವೇದ ಪದವಿ ಕೋರ್ಸ್‌ನಲ್ಲಿ ಜೂನ್–2022ರಲ್ಲಿ ನಡೆದ (ರಿಸರ್ಚ್ ಮೆಥೆಡೊಲಾಜಿ ಮತ್ತು ಮೆಡಿಕಲ್ ಸ್ಟ್ಯಾಟಿಸ್ಟಿಕ್ಸ್ ಡಿಒಎಸ್) 'ಸಂಶೋಧನಾ ವಿಧಾನ ಮತ್ತು ವೈದ್ಯಕೀಯ ಅಂಕಿ–ಅಂಶಗಳು' ಎಂಬ ವಿಷಯದಲ್ಲಿ ರಾಜೀವ ಗಾಂಧಿ ಆರೋಗ್ಯ ವಿಶ್ವವಿದ್ಯಾಲಯದಿಂದ ಜರುಗಿದ ಪರೀಕ್ಷೆಯಲ್ಲಿ ಕರ್ನಾಟಕ ರಾಜ್ಯಕ್ಕೆ 9ನೇ ರ‍್ಯಾಂಕ್ ಪಡೆದಿದ್ದಾರೆ.



ಸದ್ಯ ಹಾಸನದ ಧರ್ಮಸ್ಥಳ ಮಂಜುನಾಥ ಆಯುರ್ವೇದಿಕ್ ಮಹಾವಿದ್ಯಾಲಯದಲ್ಲಿ ಎಂ.ಡಿ. ವ್ಯಾಸಂಗ ಮಾಡುತ್ತಿದ್ದಾರೆ. ತಾಯಿ ಲಲಿತಾ ಗುಳಗಣ್ಣವರ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕಿಯಾಗಿದ್ದಾರೆ.

ಡಾ. ಕಾವೇರಿಯವರ ಸಾಧನೆಗೆ ನರೇಗಲ್ಲ ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು, ರೋಣದ ರಾಜೀವ ಗಾಂಧಿ ಆಯುರ್ವೇದ ಕಾಲೇಜಿಗೆ ಈ ಗೌರವವನ್ನು ತಂದುಕೊಟ್ಟದ್ದಕ್ಕಾಗಿ ಸಂಸ್ಥೆಯ ಅಧ್ಯಕ್ಷ, ಶಾಸಕ ಜಿ.ಎಸ್. ಪಾಟೀಲ, ಕಾಲೇಜಿನ ಪ್ರಾಚಾರ್ಯ ಐ.ಬಿ. ಕೊಟ್ಟೂರಶೆಟ್ಟರ, ನರೇಗಲ್ಲ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ, ನಿವೃತ್ತ ಪ್ರಾಚಾರ್ಯ ಡಿ.ಎ. ಅರವಟಗಿಮಠ, ಡಾ. ಎಸ್.ಎ. ರೋಣದ, ನಿವೃತ್ತ ಶಿಕ್ಷಕ ಎಂ.ಎಸ್. ದಢೇಸೂರಮಠ, ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮುಂತಾದವರು ಅಭಿನಂದಿಸಿದ್ದಾರೆ.

# ಗೂಡ್ಸ್ ವಾಹನ ತಡೆದ ಪೊಲೀಸ್ ಪೇದೆಯ ಮೇಲೆ ಹಲ್ಲೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಗೂಡ್ಸ್ ವಾಹನ ತಡೆದ ಪೊಲೀಸ್ ಪೇದೆಯ ಮೇಲೆ ಸಹೋದರರು ಹಲ್ಲೆ ಮಾಡಿರುವ ಘಟನೆ ಭಾನುವಾರ ಮಧ್ಯಾಹ್ನ ರಾಮಗಿರಿ ಚೆಕ್‌ಪೋಸ್ಟ್ ಬಳಿ ನಡೆದಿದೆ.

ತಾಲೂಕಿನ ರಾಮಗಿರಿ ಗ್ರಾಮದ ಚೆಕ್‌ಪೋಸ್ಟ್ ಮೂಲಕ ಲಕ್ಷ್ಮೇಶ್ವರದಿಂದ ಹುಬ್ಬಳ್ಳಿಯತ್ತ ಹೊರಟಿದ್ದ ಗೂಡ್ಸ್ ವಾಹನವನ್ನು ಕರ್ತವ್ಯದಲ್ಲಿದ್ದ ಪೇದೆ ಹೆಚ್. ಎನ್. ಗೊರವರ ತಡೆದಿದ್ದಾರೆ. ಈ ವೇಳೆ ವಾಹನ ನಿಲ್ಲಿಸದೇ ಹೋಗಲೆತ್ನಿಸಿದಾಗ ಪೇದೆ ವಾಹನ ಬೆನ್ನತ್ತಿ ತಡೆದಿದ್ದಾರೆ.

ಇದರಿಂದ ಸಿಟ್ಟಿಗೆದ್ದ ರಾಜು ಮಲಜಿ, ಮಂಜುನಾಥ ಮಲಜಿ, ಗಣೇಶ ಮಲಜಿ ಸಹೋದರರು ಸೇರಿದಂತೆ ಮಲ್ಲಪ್ಪ ಹೆಚ್.ಗೊಜಗೊಜಿ ಈ ನಾಲ್ವರು ಪೇದೆಗೆ ಹಿಗ್ಗಾಮುಗ್ಗಾ ಥಳಿಸಿದ್ದಾರೆ. ಚೆಕ್ ಪೋಸ್ಟ್‌ನಲ್ಲಿದ್ದ ಸಿಬ್ಬಂದಿಯಿಂದ ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ದೌಡಾಯಿಸಿ ನಾಲ್ವರನ್ನು ವಾಹನ ಸಮೇತ ವಶಕ್ಕೆ ಪಡೆದಿದ್ದಾರೆ.

ಪೇದೆಯ ಮೇಲೆ ಹಲ್ಲೆ, ಪ್ರಾಣ ಬೆದರಿಕೆ, ಕರ್ತವ್ಯಕ್ಕೆ ಅಡ್ಡಿ ಸೇರಿ ಹಲವು ಕಲಂಗಳಡಿ ಪಿಎಸ್‌ಐ ಈರಪ್ಪ ರಿತ್ತಿ ಪ್ರಕರಣ ದಾಖಲಿಸಿಕೊಂಡಿದ್ದಾರೆ. ಗೂಡ್ಸ್ ವಾಹನದಲ್ಲಿ ಏನು ಸಾಗಿಸುತ್ತಿದ್ದರು ಎಂಬುದನ್ನು ಮಾತ್ರ ಪೊಲೀಸರು ವರದಿಯಲ್ಲಿ ದಾಖಲಿಸದಿರುವುದು ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಗ್ರಾಸವಾಗಿದೆ.

# ಶಾಲೆಯ ಶಿಕ್ಷಕರ ಶ್ರಮ ಅಪಾರ



■ವಿಜಯಸಾಕ್ಷಿ ಸುದ್ದಿ, ಹರಪನಹಳ್ಳಿ

ಮಕ್ಕಳಲ್ಲಿ ವೈಜ್ಞಾನಿಕ ಮನೋಭಾವನೆಯನ್ನು ಬೆಳೆಸಿ, ಮೌಢ್ಯತೆಯನ್ನು ಅಳಿಸಿ, ವೈಚಾರಿಕತೆಯನ್ನು ಬೆಳೆಸುವ ನಿಟ್ಟಿನಲ್ಲಿ ಶಾಲೆಯ ಶಿಕ್ಷಕರು ಶ್ರಮ ವಹಿಸಿದ್ದಾರೆ ಎಂದು ಅಕ್ಷರ ದಾಸೋಹದ ಸಹಾಯಕ ನಿರ್ದೇಶಕ ಜಯರಾಜ್ ಹೇಳಿದರು.

ಪಟ್ಟಣದ ಹೊರ ವಲಯದಲ್ಲಿರುವ ದೇವರ ತಿಮ್ಮಲಾಪುರ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ವಿಜ್ಞಾನ ದಿನಾಚರಣೆ ಹಾಗೂ ಶಾಲಾ ವಾರ್ಷಿಕೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮುಖ್ಯ ಶಿಕ್ಷಕಿ ಟಿ.ಎಚ್.ಎಂ ಲತಾ ಮಾತನಾಡಿ, ಸರಕಾರಿ ಶಾಲೆಗಳು ಯಾವುದೇ ಖಾಸಗಿ ಶಾಲೆಗಳಿಗಿಂತ ಕಡಿಮೆ ಇಲ್ಲದಂತೆ ಅನೇಕ ಕಾರ್ಯಕ್ರಮಗಳ ಮೂಲಕ ಮಕ್ಕಳಲ್ಲಿ ಸೃಜನಾತ್ಮಕ ಕೌಶಲ್ಯಗಳು, ಮಾನವೀಯ ಮೌಲ್ಯಗಳು, ನಾಯಕತ್ವದ ಗುಣ, ಉತ್ತಮ ಜ್ಞಾನ, ಸಂಸ್ಕಾರ, ವೈಚಾರಿಕ ಮನೋಭಾವನೆಯನ್ನು ಬೆಳೆಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದರು.

ಶಿಕ್ಷಕಿ ಐ.ಜಿ. ಕವಿತಾ, ಕಲ್ಲಹಳ್ಳಿ ಪ್ರೌಢಶಾಲಾ ವಿಜ್ಞಾನ ಶಿಕ್ಷಕ ವೀರೇಶ್, ಬಿಆರ್‌ಪಿಗಳಾದ ಚೆನ್ನಪ್ಪ ಕಂಬಳಿ, ಅಣ್ಣಪ್ಪ ಮಾತನಾಡಿದರು. ಅಧ್ಯಕ್ಷತೆಯನ್ನು ಎಸ್.ಡಿ.ಎಂ.ಸಿ ಅಧ್ಯಕ್ಷ ಅಣ್ಣೇಶ್ ವಹಿಸಿದ್ದರು. ಗ್ರಾ.ಪಂ ಅಧ್ಯಕ್ಷೆ ಅನುಷಾ, ಸದಸ್ಯ ರೇಣುಕಮ್ಮ, ರಮೇಶ್, ಎಸ್‌ಡಿಎಂಸಿ ಸದಸ್ಯ ಮಲ್ಲಿಕಾರ್ಜುನ್, ಉಮಾ, ಮಂಜುನಾಥ, ಸುನೀತಮ್ಮ, ವೆಂಕಟೇಶ, ಸುರೇಶ್, ಬಲರಾಮ, ಶಿಕ್ಷಕರಾದ ಶೋಭಾ ಕುಮಾರಿ, ಮಲ್ಲಿಕಾರ್ಜುನ್, ಕೊಟ್ರಯ್ಯ, ಶೋಭಾ, ಗೀತಾ, ವಿಜಯ, ಸಾಜಿದಾ ಬಾನು, ರಜಿಯ ಸೇರಿದಂತೆ ಆನೇಕರು ಉಪಸ್ಥಿತರಿದ್ದರು.



■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಮದ್ಯ ಮಾರಾಟಗಾರರ ಸಂಘದ ವತಿಯಿಂದ ಸನ್ನದುದಾರರ ಬೇಡಿಕೆ, ಸಮಸ್ಯೆಗಳ ಬಗ್ಗೆ ರಾಜ್ಯದ ಮುಖ್ಯಮಂತ್ರಿ ಮತ್ತು ಮಾನ್ಯ ಅಬಕಾರಿ ಸಚಿವರಿಗೆ ಶಿಫಾರಸ್ಸು ಮಾಡುವ ಕುರಿತು ಗದಗ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಅಬಕಾರಿ ಉಪ ಆಯುಕ್ತರಿಗೆ ಗದಗ ಜಿಲ್ಲೆಯ ಎಲ್ಲಾ ತಾಲೂಕುಗಳ ಮದ್ಯ ಮಾರಾಟಗಾರರ ಸಂಘದ ಅಧ್ಯಕ್ಷರು, ಸರ್ವ ಸನ್ನದುದಾರರು ಬೇಡಿಕೆಗಳ ಮನವಿಯನ್ನು ಸಲ್ಲಿಸಿದರು.

## ದೇಶ ವಿರೋಧಿ ಕೃತ್ಯಕ್ಕೆ ಖಂಡನೆ । ಬಿಜೆಪಿ ಯುವ ಘಟಕದಿಂದ ತಿರಂಗಾ ಯಾತ್ರೆ

# ದೇಶ ವಿರೋಧಿಗಳ ಸಂಖ್ಯೆ ಉಲ್ಬಣಿಸಿದೆ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ದೇಶವಿರೋಧಿ ಘೋಷಣೆಗಳು ಹಾಗೂ ದೇಶ ವಿಭಜನೆಯ ಹೇಳಿಕೆಗಳನ್ನು ಖಂಡಿಸಿ ಪಟ್ಟಣದ ಬಿಜೆಪಿ ಯುವ ಘಟಕದಿಂದ ಮಂಗಳವಾರ ತಿರಂಗಾ ಯಾತ್ರೆ ನಡೆಯಿತು.

ಈ ವೇಳೆ ಬಿಜೆಪಿ ಮುಖಂಡ ಅಶೋಕ ವನ್ನಾಲ ಮಾತನಾಡಿ, ಒಡೆದಾಳುವ ನೀತಿ, ಅಲ್ಪಸಂಖ್ಯಾತರ ತುಷ್ಟೀಕರಣದ ರಾಜಕಾರಣ ಮಾಡುತ್ತಾ ಬಂದಿರುವ ಕಾಂಗ್ರೆಸ್‌ನ ದುರಾಡಳಿತದಿಂದ ರಾಜ್ಯ ಹಾಗೂ ದೇಶದಲ್ಲಿ ಭಾರತ ವಿರೋಧಿ ಮನಸ್ಥಿತಿಗಳ ಸಂಖ್ಯೆ ಉಲ್ಬಣಿಸುತ್ತಿದೆ ಎನ್ನುವುದಕ್ಕೆ ಅನೇಕ ಘಟನೆಗಳು ಸಾಕ್ಷಿಯಾಗಿವೆ. ಬಿಜೆಪಿ ಎಂದರೆ ದೇಶ ಭಕ್ತರ, ರಾಷ್ಟ್ರವಾದಿಗಳ ಪಕ್ಷ. ಪ್ರಧಾನಿ ಮೋದಿ ಅವರ 10 ವರ್ಷದ ಆಡಳಿತ ವಿಶ್ವವೇ ಭಾರತದತ್ತ ತಿರುಗಿ ನೋಡುವಂತೆ ಮಾಡಿದೆ. ಹೀಗಾಗಿ ಪ್ರಧಾನಿ ಮೋದಿ ಅವರ ಕೈ ಬಲಪಡಿಸಲು ನಾವೆಲ್ಲ ಒಂದಾಗಿ ಸದೃಢ ಭಾರತ ರಾಷ್ಟ್ರದ ನಿರ್ಮಾಣಕ್ಕೆ ಮುಂದಾಗಬೇಕಿದೆ. ದೇಶವಿರೋಧಿಗಳ ವಿರುದ್ಧ ಸೂಕ್ತ ಹಾಗೂ ಕಠಿಣ ಕ್ರಮಕ್ಕೆ ಸರ್ಕಾರ ಮುಂದಾಗಬೇಕು ಎಂದು ಒತ್ತಾಯಿಸಿದರು.




ಇದಕ್ಕೂ ಮುನ್ನ ಪಟ್ಟಣದ ಬಿಜೆಪಿ ಕಾರ್ಯಾಲಯದಿಂದ ಆರಂಭವಾದ ಮೆರವಣಿಗೆಗೆ ಮಾಜಿ ಸಚಿವ ಕಳಕಪ್ಪ ಬಂಡಿ ಚಾಲನೆ ನೀಡಿ ಘಟನೆಯನ್ನು ತೀವ್ರವಾಗಿ ಖಂಡಿಸಿ, ದೇಶ ವಿರೋಧಿ ಘೋಷಣೆಗಳನ್ನು ಕೂಗಿದ ಆರೋಪಿಗಳಿಗೆ ತಕ್ಷಣವೇ ಶಿಕ್ಷೆ ಪ್ರಕಟಿಸಬೇಕು ಎಂದರು.

ಬಳಿಕ ತಿರಂಗಾ ಯಾತ್ರೆಯು ಕಾಲಕಾಲೇಶ್ವರ ವೃತ್ತ, ಜೋಡು ರಸ್ತೆ, ದುರ್ಗಾ ವೃತ್ತ ಮಾರ್ಗವಾಗಿ ಅಂಬೇಡ್ಕರ ವೃತ್ತ, ಶಿವಾಜಿ ವೃತ್ತದಿಂದ ಕಾಲಕಾಲೇಶ್ವರ ವೃತ್ತ ತಲುಪಿದ ನಂತರ ಸಭೆಯಾಗಿ ಮಾರ್ಪಟ್ಟಿತು.

ಈ ವೇಳೆ ಬಿಜೆಪಿ ರೋಣ ಮಂಡಲ ಅಧ್ಯಕ್ಷ ಮುತ್ತಣ್ಣ ಕಡಗದ, ನಗರ ಘಟಕ ರಾಜೇಂದ್ರ ಘೋರ್ಪಡೆ, ವೀರಪ್ಪ ಪಟ್ಟಣಶೆಟ್ಟಿ, ಕನಕಪ್ಪ ಅರಳಿಗಿಡದ, ಮುದಿಯಪ್ಪ ಮುಧೋಳ, ಸುಭಾಸ ಮ್ಯಾಗೇರಿ, ಆರ್.ಕೆ. ಚವ್ಹಾಣ, ಸಂಜೀವ ಜೋಶಿ, ಶ್ರೀನಿವಾಸ ಸವದಿ, ಸೂಗುರೇಶ ಕಾಜಗಾರ, ಬುಡ್ಡಪ್ಪ ಮೂಲಿಮನಿ, ಡಿ.ಜಿ. ಕಟ್ಟಿಮನಿ, ಸಂಜೀವ ದೇಸಾಯಿ, ಗುಲಾಂ ಹುನಗುಂದ ಮುಂತಾದವರಿದ್ದರು.

# ವಿಜೃಂಭಣೆಯಿಂದ ಜರುಗಿದ ಕುಮಾರೇಶ್ವರ ರಥೋತ್ಸವ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಶಾಖಾ ಶಿವಯೋಗಮಂದಿರಮಠ ನಿಡಗುಂದಿಕೊಪ್ಪ ಗ್ರಾಮದಲ್ಲಿ ಹಾನಗಲ್ಲ ಕುಮಾರ ಶಿವಯೋಗಿಗಳವರ 94ನೇ ಪುಣ್ಯಸ್ಮರಣೋತ್ಸವ ಸೋಮವಾರ ಸಂಜೆ ನಾಡಿನ ಹರ–ಗುರು ಚರಮೂರ್ತಿಗಳ ಸಮ್ಮುಖದಲ್ಲಿ ಅತ್ಯಂತ ವಿಜೃಂಭಣೆಯಿಂದ ನೆರವೇರಿತು.


ಯಲಬುರ್ಗಾ ತಾಲೂಕು ಬಿನ್ನಾಳ ಗ್ರಾಮದಿಂದ ತೇರಿನ ಕಳಸ ಹಾಗೂ ಮುಧೋಳ ಗ್ರಾಮದಿಂದ ಪಾಲಕಿ ಹಾಗೂ ನಂದಿಕೋಲ ಮತ್ತು ಮಾರನಬಸರಿ ಗ್ರಾಮದಿಂದ ರಥದ



ಹಗ್ಗವನ್ನು, ನಿಡಗುಂದಿಯಿಂದ ಕುಮಾರೇಶ್ವರ ಭಾವಚಿತ್ರದ ಭವ್ಯ ಮೆರವಣಿಗೆಯು ಸಕಲ ವಾದ್ಯ ವೈಭವದೊಂದಿಗೆ ತರಲಾಯಿತು. ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಮುಪ್ಪಿನ ಬಸವಲಿಂಗ ಸ್ವಾಮೀಜಿಯವರು ರಥೋತ್ಸವಕ್ಕೆ ಚಾಲನೆ ನೀಡಿದರು.

ದೀಪಾಂಕಾರಗಳಿಂದ ಆಕರ್ಷಕವಾದ ತೇರು ಸಂಜೆ 7ಕ್ಕೆ ಚಲಿಸಲು ಆರಂಭಿಸಿದಾಗ ಭಕ್ತರು ಉತ್ತತ್ತಿ ಎಸೆದು ಘೋಷಣೆ ಕೂಗುತ್ತಾ ತೇರು ಎಳೆದರು. ತೇರು ಎಳೆಯುವ ಸಂದರ್ಭದಲ್ಲಿ ಹಾಲಕೆರೆಯ ಶ್ರೀ ಅನ್ನದಾನೇಶ್ವರ ಸಂಸ್ಥಾನ ಮಠದ ಪೀಠಾಧಿಪತಿ ಮುಪ್ಪಿನ ಬಸವಲಿಂಗ ಸ್ವಾಮೀಜಿಯವರು, ನಿಡಗುಂದಿಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿ, ಲಿಂಗನಾಯಕನಹಳ್ಳಿಯ ನಿರಂಜನ ದೇವರು, ಗದುಗಿನ ಚಂದ್ರಶೇಖರ ದೇವರು, ಅಂಕಲಗಿ ಮಠದ ಅಡವಿ ಸಿದ್ದರಾಮ ಸ್ವಾಮೀಜಿಗಳು, ಗ್ರಾಮದ ಗುರು–ಹಿರಿಯರು, ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಭಕ್ತರು ಆಗಮಿಸುವ ಮೂಲಕ ಜಾತ್ರಾ ಮಹೋತ್ಸವಕ್ಕೆ ಸಾಕ್ಷಿಯಾದರು.

# ಜಾತ್ರಾ ಮಹೋತ್ಸವ, ಸಾಮೂಹಿಕ ವಿವಾಹ ಏ.9ಕ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕಳಸಾಪುರ ಗ್ರಾಮದಲ್ಲಿ ಶ್ರೀ ಈಶ್ವರ ಬಸವಣ್ಣ ದೇವರ 14ನೇ ವರ್ಷದ ಜಾತ್ರಾ ಮಹೋತ್ಸವ ಹಾಗೂ ಶಿವಶರಣೆ ಗುಡ್ಡಾಪುರದ ದಾನಮ್ಮದೇವಿ ಪುರಾಣ ಪ್ರಾರಂಭೋತ್ಸವ ನೆರವೇರಲಿದೆ.

ಮಾ.25ರಿಂದ ಏಪ್ರಿಲ್ 4ರವರೆಗೆ ಪ್ರತಿದಿನ ಸಂಜೆ 7 ಗಂಟೆಗೆ ಶಿವಶರಣೆ ಗುಡ್ಡಾಪುರದ ಶ್ರೀ ದಾನಮ್ಮದೇವಿ ಪುರಾಣವನ್ನು ವೇ.ಮೂ. ಶಿವಲಿಂಗಯ್ಯ ಶಾಸ್ತ್ರಿಗಳು ಹಿರೇಮಠ ಸಿದ್ದಾಪುರ ಅವರು ಪ್ರವಚನ ಮಾಡುವರು. ಸಂಗಮೇಶ ಪಾಟೀಲ ಸಂಗೀತ ಸೇವೆ ನೀಡುವರು. ತೋಟೆಂದ್ರಕುಮಾರ ಕಟ್ಟಿಸಂಗಾವಿ ತಬಲಾ ಸಾಥ್ ನೀಡುವರು. ಏ.8ರಂದು ಸಂಜೆ 4 ಗಂಟೆಗೆ ಕುಂಭಮೇಳ ಜರುಗುವುದು.

ಏ. 9ರ ಯುಗಾದಿ ಪಾಡ್ಯದಂದು ಬೆಳಿಗ್ಗೆ 11.30ಕ್ಕೆ ಸರ್ವಧರ್ಮ ಸಾಮೂಹಿಕ ವಿವಾಹ ಮಹೋತ್ಸವ ಜರುಗುವುದು. ಸಂಜೆ 5.30ಗಂಟೆಗೆ ಮಹಾರಥೋತ್ಸವ, ರಾತ್ರಿ 9.30 ಗಂಟೆಗೆ ಶ್ರೀ ಗುರೂಜಿ ಮೆಲೋಡಿಸ್ ಇವೆಂಟ್ಸ್ ಗದಗ ಅವರಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ.

ಏ.5ರಂದು ಬೆಳಿಗ್ಗೆ 8.30 ಗಂಟೆಗೆ ಕಳಸಾರೋಹಣ, ಏ.5ರಿಂದ ಏ.10ರವರೆಗೆ ಪ್ರತಿದಿನ ಸಂಜೆ 7 ಗಂಟೆಗೆ ಧಾರ್ಮಿಕ ಮತ್ತು ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿವೆ. ಏ.10ರಂದು ಸಂಜೆ 5.30 ಗಂಟೆಗೆ ಲಘು ರಥೋತ್ಸವ, ಏ. 5ರಿಂದ ಏ.7ರವರೆಗೆ ಬೆಳಿಗ್ಗೆ 9 ಗಂಟೆಗೆ ತಾಲೂಕು ಮಟ್ಟದ ಬಾಲಕರ ಕಬಡ್ಡಿ ಪಂದ್ಯಾವಳಿ (14 ವರ್ಷದ ಒಳಗಿನವರಿಗೆ, 45 ಕೆಜಿ ತೂಕವುಳ್ಳವರಿಗೆ) ಜರುಗುವದು.

ಸಾಮೂಹಿಕ ವಿವಾಹಕ್ಕೆ ಏ.2ರ ಒಳಗಾಗಿ ಹೆಸರು ನೋಂದಾಯಿಸಬೇಕು. ಹೆಚ್ಚಿನ ಮಾಹಿತಿಗಾಗಿ 9739233949, 9902598388, 8722701169, 9880335813 ಸಂಪರ್ಕಿಸುವಂತೆ ಪ್ರಕಟಣೆ ತಿಳಿಸಿದೆ.

## ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿ.ವಿ ಘಟಿಕೋತ್ಸವ ಇಂದು

# 'ಗ್ರಾಮೀಣಾಭಿವೃದ್ಧಿಯೇ ನಮ್ಮ ಸಂಕಲ್ಪ'


■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ನಾಗಾವಿಯ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ವಿಶ್ವ ವಿದ್ಯಾಲಯದ 4ನೇ ಘಟಿಕೋತ್ಸವವನ್ನು ಮಾ.6ರಂದು ಬೆಳಿಗ್ಗೆ 11.30ಕ್ಕೆ ಹಮ್ಮಿಕೊಳ್ಳಲಾಗಿದೆ ಎಂದು ಕುಲಪತಿ ವಿಷ್ಣುಕಾಂತ ಚಟಪಲ್ಲಿ ಹೇಳಿದರು.

ನಾಗಾವಿಯ ಆರ್.ಡಿ.ಪಿ.ಆರ್. ವಿಶ್ವವಿದ್ಯಾಲಯದಲ್ಲಿ ಮಂಗಳವಾರದಂದು ಜರುಗಿದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 'ಗ್ರಾಮೀಣಾಭಿವೃದ್ಧಿಯೇ ನಮ್ಮ ಸಂಕಲ್ಪ' ಘೋಷವಾಕ್ಯದಡಿ ಜರುಗುವ 4ನೇ ಘಟಿಕೋತ್ಸವದಲ್ಲಿ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್, ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕ ಖರ್ಗೆ, ಕೇಂದ್ರ ಸರಕಾರದ ಪಂಚಾಯತ್ ರಾಜ್ ಮಂತ್ರಾಲಯದ ಮಾಜಿ ಜಂಟಿ ಕಾರ್ಯದರ್ಶಿ ಡಾ. ಟಿ.ಆರ್. ರಘುನಂದನ ಅವರುಗಳು ಪಾಲ್ಗೊಳ್ಳಲಿದ್ದಾರೆ ಎಂದು ಹೇಳಿದರು.

ಪಂಜಾಬ್ ಪ್ರಾಂತದಿಂದ ಕರ್ನಾಟಕಕ್ಕೆ ಆಗಮಿಸಿ ಕನ್ನಡ ಭಾಷೆ, ಸಂಸ್ಕೃತಿ, ಆಚಾರ ವಿಚಾರಗಳನ್ನು ಅಳವಡಿಸಿಕೊಂಡು ಅಚ್ಚ ಕನ್ನಡಿಗರಾಗಿ ಸಾರ್ಥಕ ಜೀವನ ನಡೆಸಿಕೊಂಡು ಬಂದಿರುವ ಐಎಎಸ್ ಅಧಿಕಾರಿ ಚಿರಂಜೀವ್ ಸಿಂಗ್ ಅವರಿಗೆ ಡಾಕ್ಟರ್ ಆಫ್ ಲಿಟರೇಚರ್ (ಡಿ.ಲಿಟ್) ಗೌರವ ಪದವಿ ಹಾಗೂ ಸಹಕಾರ ಗ್ರಾಮೀಣ ಅಭಿವೃದ್ಧಿ ಕ್ಷೇತ್ರಗಳಲ್ಲಿ ಹಾಗೂ ಪಂಚಾಯತ್ ರಾಜ್ ವ್ಯವಸ್ಥೆಯ ಮೂಲಕ ಅಧಿಕಾರದ ವಿಕೇಂದ್ರೀಕರಣಗೊಳಿಸುವ ಹಾಗೂ ನೀತಿ ನಿಯಮಗಳನ್ನು ರೂಪಿಸುವ ಪ್ರಕ್ರಿಯೆಯಲ್ಲಿ ಪ್ರಮುಖ ಪಾತ್ರ ವಹಿಸಿದ ಹಾಗೂ ಪ್ರಸ್ತುತ ಕರ್ನಾಟಕ ರಾಜ್ಯದ 5ನೇ ಹಣಕಾಸು ಆಯೋಗದ ಅಧ್ಯಕ್ಷರಾಗಿ ಹಾಗೂ ಕರ್ನಾಟಕ ಪಂಚಾಯತ್ ರಾಜ್ ಪರಿಷತ್ತಿನ ಕಾರ್ಯಕಾರಿ ಅಧ್ಯಕ್ಷರಾಗಿ ಕಾರ್ಯನಿರ್ವಹಿಸುತ್ತಿರುವ ಸಿ. ನಾರಾಯಣಸ್ವಾಮಿ ಅವರಿಗೆ ಡಾಕ್ಟರ್ ಆಫ್ ಲಾಸ್ (ಎಲ್.ಎಲ್.ಡಿ) ಗೌರವ ಪದವಿ ನೀಡಲಾಗುತ್ತಿದೆ ಎಂದು ವಿವರಿಸಿದರು.





4ನೇ ಘಟಿಕೋತ್ಸವದಲ್ಲಿ 10 ವಿವಿಧ ಸ್ನಾತಕೋತ್ತರ ಕಾರ್ಯಕ್ರಮಗಳ 239 ವಿದ್ಯಾರ್ಥಿಗಳಿಗೆ ಹಾಗೂ 5 ಡಿಪ್ಲೊಮಾ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಪದವಿಗಳನ್ನು ಪ್ರದಾನ ಮಾಡಲಾಗುವುದು. ಅದರಲ್ಲಿ ವಿವಿಧ ಸ್ನಾತಕೋತ್ತರ ವಿಭಾಗಗಳಲ್ಲಿ ಅತ್ಯಧಿಕ ಅಂಕ ಗಳಿಸಿದ 11 ವಿದ್ಯಾರ್ಥಿಗಳಿಗೆ ಚಿನ್ನದ ಪದಕ ಹಾಗೂ ಎರಡು ಮತ್ತು ಮೂರನೇ ರ್‍ಯಾಂಕ್ ಗಳಿಸಿದ 10 ವಿದ್ಯಾರ್ಥಿಗಳಿಗೆ ಮೆರಿಟ್ ಪ್ರಮಾಣಪತ್ರ ನೀಡಲಾಗುತ್ತಿದೆ ಎಂದು ವಿಷ್ಣುಕಾಂತ ಚಟಪಲ್ಲಿ ಮಾಹಿತಿ ನೀಡಿದರು.

ಸುದ್ದಿಗೋಷ್ಠಿಯಲ್ಲಿ ಕುಲಸಚಿವ ಡಾ. ಸುರೇಶ ನಾಡಗೌಡರ, ವಾರ್ತಾಧಿಕಾರಿ ವಸಂತ ಮಡ್ಲೂರ ಇದ್ದರು.

# ಸ್ನಾತಕೋತ್ತರ ಸಾಧಕರಿಗೆ ಚಿನ್ನದ ಪದಕ ಪ್ರದಾನ



■ವಿಜಯಸಾಕ್ಷಿ ಸುದ್ದಿ, ಗದಗ

ಮಾರ್ಚ್ 6ರಂದು ಜರುಗಲಿರುವ ಕರ್ನಾಟಕದ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ 4ನೇ ಘಟಿಕೋತ್ಸವ ಸಮಾರಂಭದಲ್ಲಿ 11 ಸ್ನಾತಕೋತ್ತರ ಸಾಧಕರಿಗೆ ಚಿನ್ನದ ಪದಕಗಳನ್ನು ಪ್ರದಾನ ಮಾಡಲಾಗುತ್ತಿದೆ.

ಎಂ.ಬಿ.ಎ ವಿಭಾಗದಲ್ಲಿ ಅತ್ಯಧಿಕ ಅಂಕಗಳನ್ನು ಪಡೆದ ಓಜಸ್ವಿ ಮಲ್ಲಾಡದ, ಎಂ.ಎ (ಆರ್.ಡಿ.ಪಿ.ಆರ್.) ವಿಭಾಗದ ಲಿಂಗರಾಜು ಎಚ್.ಎಮ್, ಎಂ.ಎ (ಪಿ.ಎ.) ವಿಭಾಗದ ಭೀಮಪ್ಪ ಚಲವಾದಿ, ಎಂ.ಎಸ್ಸಿ. (ಜಿ.ಐ.ಎಸ್ )ವಿಭಾಗದ ಯಲ್ಲಾಲಿಂಗ ಹೊಸಮನಿ, ಎಂ.ಎಸ್ಸಿ (ಎಫ್‌ಎಸ್‌ಟಿ) ವಿಭಾಗದ ನಿಶಾ ಎಂ, ಎಂಪಿಎಚ್ ವಿಭಾಗದ ಶರೋನ್ ಅನ್ನಾ ಥಾಮಸ್, ಎಂಎಸ್‌ಡಬ್ಲ್ಯು ವಿಭಾಗದ ಅಕ್ಷತಾ ಸಾನಿಕೊಪ್ಪ ಹಾಗೂ ಕೀರ್ತಿ ಗಾಮನಗಟ್ಟಿ, ಎಂಎ (ಡಿಇ)ವಿಭಾಗದ ಜಗದೀಶ ಎನ್.ಬಳಿಗಾರ, ಎಂಕಾಂ ವಿಭಾಗದ ಲತಾ ಕಡಾರ, ಎಂ.ಎಸ್‌ಸಿ (ಸಿ.ಎಸ್.) ವಿಭಾಗದ ಪವಿತ್ರಾ ಶೇಟ ಇವರುಗಳಿಗೆ ಚಿನ್ನದ ಪದಕಗಳನ್ನು ನೀಡಿ ಗೌರವಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

## 'ಬಿಜೆಪಿ ಸಂಕಲ್ಪ ಪತ್ರ ಅಭಿಯಾನ'ಕ್ಕೆ ಗದಗ ಜಿಲ್ಲಾ ಬಿಜೆಪಿ ವತಿಯಿಂದ ಚಾಲನೆ

# ಭಾರತವನ್ನು ಸುಭದ್ರವಾಗಿಸಲು ಶ್ರಮಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ ಲೋಕಸಭಾ ಚುನಾವಣೆಯಲ್ಲಿ ನರೇಂದ್ರ ಮೋದಿಯವರ ನೇತೃತ್ವದ ಕೇಂದ್ರ ಸರ್ಕಾರದ ಚುನಾವಣೆಯಲ್ಲಿ ನೀಡಿದ ಪ್ರಣಾಳಿಕೆಯಲ್ಲಿನ ಭರವಸೆಗಳಲ್ಲಿ ಶೇ.95ರಷ್ಟನ್ನು ಈಡೇರಿಸಿದ್ದು, ಇನ್ನುಳಿದ ಶೇ.5ರಷ್ಟು ಭರವಸೆಗಳು ಕಾರ್ಯಗತಗೊಳ್ಳುವ ಕಾರ್ಯ ಮುಂದುವರೆಯಲಿದೆ ಎಂದು ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು(ತೋಟಪ್ಪ) ಕುರಡಗಿ ತಿಳಿಸಿದರು.

ಬಿಜೆಪಿ ಸಂಕಲ್ಪ ಪತ್ರ ಅಭಿಯಾನಕ್ಕೆ ಮಂಗಳವಾರ ಚಾಲನೆ ನೀಡಿ ಅವರು ಮಾತನಾಡಿದರು.

3ನೇ ಬಾರಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರ ಅಸ್ತಿತ್ವಕ್ಕೆ ಬರಲಿದ್ದು, ಎಲ್ಲ ವರ್ಗದ ಜನಾಭಿಪ್ರಯವನ್ನು ಜಿಲ್ಲೆಯಾದ್ಯಂತ ಪಡೆದುಕೊಳ್ಳಲು ಪ್ರಕ್ರಿಯೆ ಪ್ರಾರಂಭವಾಗಿದೆ. ಸಾರ್ವಜನಕರು ಸಲಹೆ ಪೆಟ್ಟಿಗೆಯ ಮೂಲಕ ಅಭಿಪ್ರಾಯ ನೀಡಬಹುದು. 9090902024 ಸಂಖ್ಯೆಗೆ ಮಿಸ್ಡ್‌ಕಾಲ್ ನೀಡಿ ಸಲಹೆ ನೀಡಬಹುದು ಮತ್ತು ನಮೋ ಆಪ್ ಮೂಲಕ ತಮ್ಮ ಮೊಬೈಲ್‌ಗಳಲ್ಲಿ ನೇರವಾಗಿ ಆನ್‌ಲೈನಲ್ಲಿ ಸಲಹೆ ನೀಡಬಹುದು ಎಂದು ತಿಳಿಸಿದರು.



ಈ ಅಭಿಯಾನವು ಮಾರ್ಚ್‌ವರೆಗೆ 15 ದಿನಗಳ ಕಾಲ ನಡೆಯಲಿದ್ದು, ಭಾರತೀಯ ಜನತಾ ಪಾರ್ಟಿ ಕಾರ್ಯಕರ್ತರು ಸಮಾಜದ ವಿವಿಧ ಕ್ಷೇತ್ರದ ನಾಗರಿಕರಿಂದ ಸಲಹೆಗಳನ್ನು ಪಡೆಯಲಿದ್ದಾರೆ. ಕಾರಣ, ಗದಗ ಜಿಲ್ಲೆಯ ಪ್ರತಿಯೊಬ್ಬ ನಾಗರಿಕನಿಗೂ ಸಲಹೆ ನೀಡುವ ಅವಕಾಶವನ್ನು ನರೇಂದ್ರ ಮೋದಿಯವರು ನೀಡಿದ್ದು, ಅಭಿಯಾನದಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಪಾಲ್ಗೊಂಡು ತಮ್ಮ ಅಮೂಲ್ಯ ಸಲಹೆಗಳನ್ನು ನೀಡಿ ಮತ್ತೊಮ್ಮೆ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತವನ್ನು ವಿಶ್ವ ಗುರುವನ್ನಾಗಿಸಲು ಮತ್ತು ಭಾರತ ದೇಶ ಸುಭದ್ರ ದೇಶವನ್ನಾಗಿಸಲು ಶ್ರಮಿಸಬೇಕಿದೆ ಎಂದು ರಾಜು ಕುರುಡಗಿ ವಿನಂತಿಸಿದರು.

ಹಾವೇರಿ ಲೋಕಸಭಾ ಚುನಾವಣೆ ಪ್ರಣಾಳಿಕೆ ಪ್ರಮುಖರು, ವಿ.ಪ ಸದಸ್ಯ ಎಸ್.ವ್ಹಿ. ಸಂಕನೂರ, ಪ್ರಕೋಷ್ಠಗಳ ಜಿಲ್ಲಾ ಸಂಚಾಲಕ ಶಶಿಧರ ದಿಂಡೂರ, ಸಹ-ಸಂಚಾಲಕ ರಮೇಶ ಸಜ್ಜಗಾರ, ಜಿಲ್ಲಾ ಪ್ರಧಾನ ಕಾರ್ಯದರ್ಶಿಗಳಾದ ಪಕ್ಕಿರೇಶ ರಟ್ಟಿಹಳ್ಳಿ, ಲಿಂಗರಾಜ ಪಾಟೀಲ, ಆರ್.ಕೆ. ಚವ್ಹಾಣ, ಗದಗ ನಗರ ಮಂಡಲ ಅಧ್ಯಕ್ಷ ಅನಿಲ ಅಬ್ಬಿಗೇರಿ, ಪ್ರಮುಖರಾದ ರಾಘವೇಂದ್ರ ಯಳವತ್ತಿ, ಪ್ರಕಾಶ ಬಾಕಳೆ, ಮಹೇಶ ದಾಸರ, ಅಶೋಕ ಕರೂರ ಮುಂತಾದವರು ಉಪಸ್ಥಿತರಿದ್ದರು.

# ಜನರಿಗೆ ತೊಂದರೆಯಾದರೆ ಜಿಲ್ಲಾಡಳಿತವೇ ಹೊಣೆ

▶▶ಮೊದಲನೇ ಪುಟದಿಂದ

ಬರಗಾಲ ಪರಿಸ್ಥಿಯಲ್ಲಿ ಸರಕಾರದ ಗ್ಯಾರಂಟಿ ಯೋಜನೆಗಳು ಜನರ ಕೈ ಹಿಡಿದಿವೆ. ಖರ್ಚಿಗೆ ಈ ಯೋಜನೆಗಳಿಂದ ಸ್ವಲ್ಪ ಹಣ ಸಿಗುತ್ತಿದೆ. ಪ್ರತಿ ಕುಟುಂಬಕ್ಕೆ ಪ್ರತಿ ತಿಂಗಳು ಗ್ಯಾರಂಟಿ ಯೋಜನೆಗಳಿಂದ 4-5 ಸಾವಿರ ಹಣ ಸಿಗುತ್ತಿದೆ. ರಾಜ್ಯದ 4.5 ಕೋಟಿ ಕುಟುಂಬಗಳಿಗೆ ಗ್ಯಾರಂಟಿ ಯೋಜನೆಗಳ ಪ್ರಯೋಜನ ತಲುಪುತ್ತಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ಜಿಲ್ಲೆಗಳಲ್ಲಿ ಸಮರ್ಥವಾಗಿ ವಿಪತ್ತು ನಿರ್ವಹಿಸಲು ಅಗತ್ಯದಷ್ಟು ಅನುದಾನವನ್ನು ಎಲ್ಲ ಡಿಸಿ, ತಹಸೀಲ್ದಾರರಿಗೆ ನೀಡಲಾಗಿದೆ. ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ಹೊಸದಾಗಿ ಬೋರ್‌ವೆಲ್ ಕೊರೆಸಲು ಪ್ರತಿ ಜಿಲ್ಲೆಗೆ ಹೆಚ್ಚುವರಿಯಾಗಿ ರೂ.2 ಕೋಟಿ ಅನುದಾನವನ್ನು ಬಿಡುಗಡೆ ಮಾಡಲಾಗುತ್ತದೆ ಎಂದು ಮುಖ್ಯಮಂತ್ರಿಗಳು ಸಂವಾದದಲ್ಲಿ ತಿಳಿಸಿದರು.

ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ., ಜಿ.ಪಂ ಉಪ ಕಾರ್ಯದರ್ಶಿ ವಿಜಯಕುಮಾರ ಆಜೂರ, ಮಹಾನಗರಪಾಲಿಕೆ ಅಧೀಕ್ಷಕ ಇಂಜಿನಿಯರ್ ತಿಮ್ಮಪ್ಪ, ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಅರಣ್ಯ ಇಲಾಖೆ ಉಪ ಅರಣ್ಯ ಸಂರಕ್ಷಣಾಧಿಕಾರಿ ಪರಿಮಳಾ ವಿ.ಎಚ್., ಕುಡಿಯುವ ನೀರು ಸರಬರಾಜು ಹಾಗೂ ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಇಂಜಿನಿಯರ್ ಆರ್.ಎಂ. ಸೊಪ್ಪಿಮಠ, ಕೃಷಿ ಇಲಾಖೆ ಜಂಟಿ ನಿರ್ದೇಶಕ ಡಾ. ಕಿರಣಕುಮಾರ, ತೋಟಗಾರಿಕೆ ಇಲಾಖೆ ಉಪನಿರ್ದೇಶಕ ಕೆ.ಸಿ. ಬದ್ರಣ್ಣವರ, ಪಶುಸಂಗೋಪನೆ ಇಲಾಖೆ ಉಪನಿರ್ದೇಶಕ ಡಾ. ರವಿ ಸಾಲಿಗೌಡರ, ಹೆಸ್ಕಾಂ ಅಧೀಕ್ಷಕ ಇಂಜಿನಿಯರ್ ಶರಣಮ್ಮ ಜಂಗಿನ, ಕಾರ್ಯಪಾಲಕ ಇಂಜಿನಿಯರ್ ಎಂಎಂ. ನದಾಫ, ಕರ್ನಾಟಕ ನೀರಾವರಿ ನಿಗಮದ ಕಾರ್ಯಪಾಲಕ ಇಂಜಿನಿಯರ್ ಬಸವರಾಜ ಬಿಲ್ಲಕುಂದಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಬಿಜೆಪಿ ಮಹಿಳಾ ಮೋರ್ಚಾ ವತಿಯಿಂದ ಬೈಕ್ ರ್‍ಯಾಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಜಿಲ್ಲಾ ಮಹಿಳಾ ಮೋರ್ಚಾ ವತಿಯಿಂದ ನಾರಿ ಶಕ್ತಿ ವಂದನಾ ಯಾತ್ರಾ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಗಿತ್ತು.

ಪ್ರಧಾನಮಂತ್ರಿ ನರೇಂದ್ರ ಮೋದಿಯವರು ದೇಶದ ಮಹಿಳೆಯರ ಆರ್ಥಿಕತೆಯನ್ನು ಬಲಪಡಿಸಲು ಹಮ್ಮಿಕೊಂಡಿರುವ ನಾರಿ ಶಕ್ತಿ ಯೋಜನೆಯ ಅರಿವು ಮೂಡಿಸುವ ಉದ್ದೇಶದಿಂದ ಬಿಜೆಪಿ ಮಹಿಳಾ ಮೋರ್ಚಾ ಹಮ್ಮಿಕೊಂಡಿದ್ದ ಈ ರ್‍ಯಾಲಿಗೆ ಪೂಜ್ಯ ಕಲ್ಲಯ್ಯಜ್ಜನವರು ಚಾಲನೆ ನೀಡಿದರು.



ಈ ಸಂದರ್ಭದಲ್ಲಿ ಬಿಜೆಪಿ ಗದಗ ಜಿಲ್ಲಾಧ್ಯಕ್ಷ ರಾಜು ಕುರಡಗಿ, ಶಕ್ತಿವಂದನಾ ಕಾರ್ಯಕ್ರಮದ ಗದಗ ಜಿಲ್ಲಾ ಪ್ರಭಾರಿ ಭಾರತಿ ಅಳವಂಡಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಲಿಂಗರಾಜ ಪಾಟೀಲ, ಮಹಿಳಾ ಮೋರ್ಚಾ ಜಿಲ್ಲಾಧ್ಯಕ್ಷರಾದ ನಿರ್ಮಲಾ ಕೊಳ್ಳಿ, ಪಕ್ಷದ ಹಿರಿಯರಾದ ಕಾಂತಿಲಾಲ ಬನ್ಸಾಲಿ, ಅನಿಲ ಅಬ್ಬಿಗೇರಿ, ಸಿದ್ದು ಪಲ್ಲೇದ, ನಗರಸಭಾ ಅಧ್ಯಕ್ಷೆ ಉಷಾ ದಾಸರ, ಪ್ರಮುಖರಾದ ವಿಜಯಲಕ್ಷ್ಮೀ ಮಾನ್ವಿ, ಸ್ವಾತಿ ಅಕ್ಕಿ, ಕವಿತಾ ಬಂಗಾರಿ, ಸಾವಿತ್ರಿ ಪಾಟೀಲ, ಶಿವಲಿಲಾ ಉಮಚಗಿ, ಸುಮಂಗಲಾ ಕೊನೆವಾಲ, ಕಮಲಾಕ್ಷಿ ತಕ್ಕಲಕೋಟಿ, ಶೇಖವ್ವ ಮಾಸರೆಡ್ಡಿ, ಯೋಗೇಶ್ವರ ಭಾವಿಕಟ್ಟಿ, ಮೇಘನಾ ಕೊಟ್ಟುರ, ರೇಖಾ ಬಂಗಾರಶೆಟ್ಟರ, ವಿಜಯಲಕ್ಷ್ಮೀ ದಿಂಡೂರ, ಚನ್ನಮ್ಮ ಹುಳಕಣ್ಣವರ, ವಿದ್ಯಾವತಿ ಗಡಗಿ, ಅಶೋಕ ಸಂಕಣ್ಣವರ, ಸಂತೋಷ ಅಕ್ಕಿ, ರಮೇಶ ಸಜ್ಜಗಾರ, ಅಮರನಾಥ ಬೆಟಗೇರಿ, ಸುರೇಶ ಚಿತ್ತರಗಿ, ಮುತ್ತು ಮುಶಿಗೇರಿ, ಅಮರನಾಥ ಗಡಗಿ ಮುಂತಾದವರಿದ್ದರು.

# ಲಯನ್ಸ್ ಕ್ಲಬ್‌ನಿಂದ ನೇತ್ರದಾನಕ್ಕೆ ಪ್ರೇರಣೆ



■ವಿಜಯಸಾಕ್ಷಿ ಸುದ್ದಿ, ಗದಗ

ಬೆಟಗೇರಿ ನಿವಾಸಿ ಪ್ರೇಮನಾಥ ಎಫ್. ಬರದ್ವಾಡ (73) ಮಂಗಳವಾರ ನಿಧನರಾದರು. ಗದಗ-ಬೆಟಗೇರಿ ಲಯನ್ಸ್ ಕ್ಲಬ್ ಪ್ರೇರಣೆಯಿಂದ ಮೃತರ ನೇತ್ರಗಳನ್ನು ಕುಟುಂಬದವರು ದಾನ ಮಾಡಿದರು.

ಲಯನ್ಸ್ ಕ್ಲಬ್ ತಂಡವು ಕೈಗೊಂಡ 14ನೇ ನೇತ್ರದಾನ ಇದಾಗಿದೆ. ಮರಣಾ ನಂತರ ನೇತ್ರಗಳನ್ನು ಸುಡದೆ, ಮಣ್ಣು ಮಾಡದೇ ಕುಟುಂಬದವರು ನೇತ್ರದಾನ ಮಾಡಲು ಮುಂದಾದರೆ, ಕಣ್ಣಿಲ್ಲದ ವ್ಯಕ್ತಿಗಳಿಗೆ ಮೃತರ ಕಣ್ಣುಗಳನ್ನು ಕಸಿ ಮಾಡುವ ಮೂಲಕ ಹೊರ ಜಗತ್ತನ್ನು ನೋಡುವಂತೆ ಮಾಡಲು ವೈದ್ಯಕೀಯ ಕ್ಷೇತ್ರದಲ್ಲಿ ಅವಕಾಶಗಳಿದ್ದು, ಮೃತರ ನೇತ್ರಗಳನ್ನು ದಾನ ಮಾಡಲು ಕುಟುಂಬದವರು ಮುಂದೆ ಬರಬೇಕೆಂದು ಕ್ಲಬ್ ಅಧ್ಯಕ್ಷ ರಮೇಶ ಶಿಗ್ಲಿ, ಕಾರ್ಯದರ್ಶಿ ಪ್ರವೀಣ ವಾರಕರ ಮನವಿ ಮಾಡಿಕೊಂಡರು.

ಹುಬ್ಬಳ್ಳಿಯ ಎಂ.ಎಂ. ಜೋಶಿ ನೇತ್ರಾಲಯದ ತಜ್ಞರ ತಂಡ ಬೆಟಗೇರಿಗೆ ಆಗಮಿಸಿ ನೇತ್ರದಾನದ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿದರು. ನೇತ್ರದಾನ ಮಾಡಿದ ಕುಟುಂಬದವರನ್ನು ಕ್ಲಬ್ ಪದಾಧಿಕಾರಿಗಳು ಅಭಿನಂದಿಸಿದರು. ಈ ಸಂದರ್ಭದಲ್ಲಿ ಅಶ್ವಥ್ ಸುಲಾಖೆ, ಅನಂತ ಅಮಿಚಂದ ಸೇರಿದಂತೆ ಕ್ಲಬ್‌ನ ಸದಸ್ಯರು, ಕುಟುಂಬದ ಸದಸ್ಯರು ಉಪಸ್ಥಿತರಿದ್ದರು.

# ಅಂಗಡಿ, ಉದ್ದಿಮೆಗಳ ಮಾಲೀಕರ ಗಮನಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ನಗರಸಭೆ ವ್ಯಾಪ್ತಿಯ ಅಂಗಡಿ, ವ್ಯಾಪಾರ, ಉದ್ದಿಮೆ ಹಾಗೂ ಇತರೆ ವಹಿವಾಟು ನಡೆಸುವ ಮಾಲೀಕರಿಗೆ ತಿಳಿಸುವುದೇನೆಂದರೆ, ಕರ್ನಾಟಕ ಸರಕಾರದ ಅಧಿಸೂಚನೆಯನ್ವಯ, ಕನ್ನಡ ಭಾಷಾ ಅಭಿವೃದ್ಧಿ ಅಧಿನಿಯಮ 2023ರನ್ವಯ ನಿಮ್ಮ ಮಾಲೀಕತ್ವದ ಎಲ್ಲ ಅಂಗಡಿ ಮುಂಗಟ್ಟು, ಹೊಟೇಲಗಳು, ವ್ಯವಹಾರ ಉದ್ಯಮಗಳು, ಟ್ರಸ್ಟ್‌ಗಳು, ಸಮಾಲೋಚನಾ ಕೇಂದ್ರಗಳು, ಆಸ್ಪತ್ರೆಗಳು, ಪ್ರಯೋಗ ಶಾಲೆಗಳು, ಮನೋರಂಜನಾ ಕೇಂದ್ರಗಳ ಮೇಲೆ ಪ್ರದರ್ಶಿಸುವ ನಾಮಫಲಕಗಳಲ್ಲಿ ಕನ್ನಡ ಭಾಷೆಯು ಶೇ. 60% ರಷ್ಟು ಒಳಗೊಂಡಂತೆ ಬರೆದಿರಬೇಕು. ಮತ್ತು ನೀವು ಬರೆಸಿದ ನಾಮಫಲಕದಲ್ಲಿ ಕನ್ನಡ ಭಾಷೆಯು ನಾಮಫಲಕದ ಮೇಲ್ಭಾಗದಲ್ಲಿರಬೇಕು.

ಒಂದು ವೇಳೆ ಯಾವುದೇ ವ್ಯಾಪಾರಸ್ಥರ ನಾಮಫಲಕಗಳು ಶೇ.60% ರಷ್ಟು ಕನ್ನಡ ಭಾಷೆಯಲ್ಲಿರದಿದ್ದರೆ ಅಂತಹ ನಾಮಫಲಕಗಳನ್ನು 07 ದಿನಗೊಳಗಾಗಿ ಬದಲಾವಣೆ ಮಾಡಬೇಕು. ತಪ್ಪಿದಲ್ಲಿ ನಗರ/ಪುರಸಭೆ ಕಾಯ್ದೆಯ ಪ್ರಕಾರ ಅಂತಹ ನಾಮಫಲಕಗಳನ್ನು ತೆರವುಗೊಳಿಸಿ ದಂಡ ವಿಧಿಸಲಾಗುವುದು ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನೂತನ ಅಧ್ಯಕ್ಷ, ಉಪಾಧ್ಯಕ್ಷರ ಅವಿರೋಧ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಅಬ್ಬಿಗೇರಿ ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಅಧ್ಯಕ್ಷ, ಉಪಾಧ್ಯಕ್ಷರ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ಅವಿರೋಧ ಆಯ್ಕೆ ನಡೆಯಿತು.

ನಿಕಟಪೂರ್ವ ಅಧ್ಯಕ್ಷ ಸಕ್ರಗೌಡ ಪಾಟೀಲ ಮತ್ತು ಉಪಾಧ್ಯಕ್ಷ ಸುನೀತಾ ಬಸವರಡ್ಡೇರ ಇವರ ರಾಜೀನಾಮೆಯಿಂದ ತೆರವಾದ ಸ್ಥಾನಕ್ಕೆ ನಡೆದ ಚುನಾವಣೆಯಲ್ಲಿ ನೂತನ ಅಧ್ಯಕ್ಷರಾಗಿ ಸಿದ್ದಪ್ಪ ಬಸಪ್ಪ ಹನಮನಾಳ ಮತ್ತು ಉಪಾಧ್ಯಕ್ಷರಾಗಿ ಅಂದಪ್ಪ ಮುಡಿಯಪ್ಪ ದ್ವಾಸಲಕೇರಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ರಿಟರ್ನಿಂಗ್ ಅಧಿಕಾರಿ ಪ್ರಶಾಂತ ಮುಧೋಳ ಪ್ರಕಟಿಸಿದರು.

ಬ್ಯಾಂಕ್ ನಿರೀಕ್ಷಕ ರಾಥೋಡ, ಸುರೇಶ ಬಸವರಡ್ಡೇರ, ಅಂದಪ್ಪ ವೀರಾಪೂರ, ಗುರಣ್ಣ ಅವರಡ್ಡಿ, ಶಿವಪುತ್ರಪ್ಪ ತೆಗ್ಗಿನಕೇರಿ, ಸಕ್ರಗೌಡ್ರು ಪಾಟೀಲ, ಸುನೀತಾ ಬಸವರಡ್ಡೇರ, ಲಕ್ಷ್ಮವ್ವ ಡಂಬಳ, ನಾಗನಗೌಡ ಚನ್ನಪ್ಪಗೌಡ್ರ, ಮಲ್ಲಿಕಾರ್ಜುನ ಯಲ್ಲರಡ್ಡಿ, ಈರಪ್ಪ ತಳವಾರ, ಬಸವರಾಜ ಪಲ್ಲೇದ, ಮಂಜುನಾಥ ಅಂಗಡಿ, ಎ.ಕೆ. ಮಳಗಿ, ತಾಜುದ್ದೀನ್ ದೊಡ್ಡಮನಿ, ವಿರುಪಾಕ್ಷ ಅಕ್ಕಸಾಲಿ, ಶರಣಪ್ಪ ಹೂಗಾರ, ಶಿವು ತಳಕಲ್ಲ, ಶಿವಪ್ಪ ಬಂಡಿಹಾಳ, ಹನಮಂತಪ್ಪ ಟಿ.ದ್ವಾಸಲ ಸೇರಿದಂತೆ ಇನ್ನು ಅನೇಕರು ಉಪಸ್ಥಿತರಿದ್ದರು. ರೋಣ ಮತಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ ಹಾಗೂ ಧುರೀಣರಾದ ಮಿಥುನ್ ಜಿ.ಪಾಟೀಲ ನೂತನ ಪದಾಧಿಕಾರಿಗಳಿಗೆ ಶುಭ ಹಾರೈಸಿದ್ದಾರೆ.

**ಭಾವೈಕ್ಯತೆಗೆ ಹೊಸ ಭಾಷ್ಯ ಬರೆದ ಶರಣ ಬಾಬುಸಾಹೇಬ ಜಮಾದಾರ | ಹಿರೇಮಠ ದೇವಸ್ಥಾನಕ್ಕೆ 25 ಲಕ್ಷ ರೂ ಮೌಲ್ಯದ ತೇರು ಸಮರ್ಪಣೆ**

# 'ನಂಬಿದ ಭಕ್ತನಿಗೆ ದೇವರು ಒಬ್ಬನೇ'

■ವಿಜಯಸಾಕ್ಷಿ ಸುದ್ದಿ, ನರಗುಂದ

ಜಾತಿ, ಧರ್ಮಗಳ ನಡುವೆ ಕಂದಕ ಸೃಷ್ಟಿ ಮಾಡಿ ವೈಯಕ್ತಿಕ ಬೇಳೆ ಬೇಯಿಸಿಕೊಳ್ಳುತ್ತಿರುವವರ ನಡುವೆ 'ದೇವನೊಬ್ಬ ನಾಮ ಹಲವು' ಎಂಬರ್ಥದಲ್ಲಿ ನಂಬಿಕೆಯನ್ನಿಟ್ಟಿರುವ ಮುಸ್ಲಿಂ ವ್ಯಕ್ತಿಯೊಬ್ಬರು ಹಿಂದೂ ದೇವಸ್ಥಾನಕ್ಕೆ ಹೊಸ ತೇರು ನಿರ್ಮಿಸಿಕೊಟ್ಟು ಭಾವೈಕ್ಯತೆ, ಜಾತ್ಯಾತೀತ ಪರಂಪರೆಗೆ ಹೊಸ ಮುನ್ನುಡಿ ಬರೆದಿದ್ದಾರೆ.

'ನಂಬಿದ ಭಕ್ತನಿಗೆ ದೇವರು ಒಬ್ಬನೇ' ಎಂಬ ಜಗಜ್ಯೋತಿ ಬಸವಣ್ಣನವರ ಹಿತವಚನದಂತೆ ಗದಗ ಜಿಲ್ಲೆ ನರಗುಂದ ಪಟ್ಟಣದ ಹಜರತ ಮೆಹಬೂಬಸುಭಾನಿ ದರ್ಗಾದ ಶರಣ ಬಾಬುಸಾಹೇಬ ಇಮಾಮಸಾಹೇಬ ಜಮಾದಾರ ಅವರು, ಶ್ರೀಸಿದ್ದೇಶ್ವರ ಪಂಚಗ್ರಹ ಗುಡ್ಡದ ಹಿರೇಮಠ ದೇವಸ್ಥಾನಕ್ಕೆ 25 ಲಕ್ಷ ರೂ. ಮೌಲ್ಯದ ತೇರು ನಿರ್ಮಿಸಿಕೊಟ್ಟಿದ್ದಾರೆ. ಅಲ್ಲದೆ ಪ್ರತಿ ವರ್ಷ ಜಾತ್ರಾ ಮಹೋತ್ಸವದ ತೇರನ್ನು ಎಲ್ಲ ಸಮಾಜದ ಗುರು-ಹಿರಿಯರು ಸೇರಿ ಒಂದಾಗಿ ಎಳೆಯುವುದಕ್ಕಾಗಿ ತೇರಿನ ಹಗ್ಗ ಮತ್ತು ಕಳಶವನ್ನು ಅರ್ಭಾಣ ಬಡಾವಣೆಯ ಹಜರತ್ ಮೆಹಬೂಬಸುಭಾನಿ ದರ್ಗಾದಿಂದ ಶ್ರೀಮಠದವರೆಗೆ ಮೆರವಣಿಗೆ ಮೂಲಕ ತೆಗೆದುಕೊಂಡು ಹೋಗುವುದು, ಜಾತ್ರೆ ಮುಗಿದ ಬಳಿಕ ದರ್ಗಾದ ಭಕ್ತರು ಮತ್ತೆ ಹಗ್ಗ, ಕಳಶವನ್ನು ದರ್ಗಾಕ್ಕೆ ತೆಗೆದುಕೊಂಡು ಬರುವ ಹೊಸ ಪ್ರತೀತಿ, ಧಾರ್ಮಿಕ ಭಾವೈಕ್ಯತೆಗೆ ಮುಂದಡಿ ಇಟ್ಟಿದ್ದಾರೆ. ಈ ರೀತಿಯ ಸಂಪ್ರದಾಯ ರಾಜ್ಯದಲ್ಲಿಯೇ ವಿಶೇಷ ಹಾಗೂ ಪ್ರಥಮ ಎಂದು ಹೇಳಲಾಗುತ್ತಿದೆ.





ಹಿಂದೂ-ಮುಸ್ಲಿಂ ಎಂಬ ಭೇದಭಾವ ಸೃಷ್ಟಿಯಾಗುತ್ತಿರುವ ಇತ್ತೀಚಿನ ದಿನಮಾನಗಳಲ್ಲಿ ನರಗುಂದದ ಹಜರತ್ ಮೆಹಬೂಬಸುಭಾನಿ ದರ್ಗಾದ ಶರಣ ಬಾಬುಸಾಬ ಜಮಾದಾರ ಎಲ್ಲರನ್ನು ಒಗ್ಗೂಡಿಸುವ ಕಾರ್ಯ ಮಾಡಿದ್ದಾರೆ. ಧರ್ಮ, ಧರ್ಮಗಳಿಗೆ ಬಡಿದಾಡುವ ಈ ಕಾಲದಲ್ಲಿಯೂ ಇಲ್ಲಿನ ಮುಸ್ಲಿಮರು ಸೌಹಾರ್ದಯುತವಾಗಿ ಹಿಂದುಗಳನ್ನು ಸೇರಿಸಿಕೊಂಡು ಹಲವಾರು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಪಾಲ್ಗೊಂಡು ದೇವನೊಬ್ಬನಾದರೂ ನಾಮ ಹಲವು ಎಂಬುವುದನ್ನು ತೋರಿಸಿಕೊಟ್ಟಿದ್ದಾರೆ.

**– ಶಾಂತಲಿಂಗ ಶ್ರೀಗಳು.**
ಭೈರನಹಟ್ಟಿ,ಶಿ ರೋಳ ತೋಂಟದಾರ್ಯ ಶಾಖಾಮಠದ ಪೀಠಾಧಿಪತಿ.

ನರಗುಂದ ಅರ್ಭಾಣ ಬಡಾವಣೆ ನಿವಾಸಿಯಾಗಿರುವ ಬಾಬುಸಾಬ ಜಮಾದಾರ ಅವರು ಮೂಲತಃ ರೈತಾಪಿ ಕುಟುಂಬದವರು. ಅಷ್ಟೊಂದು ವಿದ್ಯಾವಂತರಲ್ಲದಿದ್ದರೂ ಕೃಷಿಯ ಜತೆಗೆ ಆಧ್ಯಾತ್ಮಿಕತೆಯಲ್ಲಿ ಅಪಾರ ಜ್ಞಾನ, ಅನುಭವ, ಆಸಕ್ತಿ ಹೊಂದಿದ್ದಾರೆ. ನರಗುಂದದ ಹುಬ್ಬಳ್ಳಿ-ವಿಜಯಪೂರ ರಾಷ್ಟ್ರೀಯ ಹೆದ್ದಾರಿ ಪಕ್ಕದಲ್ಲಿರುವ ಮಹೆಬೂಬಸುಭಾನಿ ದರ್ಗಾದ ಅರ್ಚಕರಾಗಿ 19 ವರ್ಷಗಳಿಂದ ಹಿಂದೂ-ಮುಸ್ಲಿಂ ದೇವರುಗಳಿಗೆ ನಿತ್ಯ ವಿಶೇಷ ಪೂಜೆ-ಪುನಸ್ಕಾರ ಸಲ್ಲಿಸುತ್ತಿದ್ದಾರೆ. ಹುಟ್ಟಿನಿಂದ ಮುಸ್ಲಿಮರಾಗಿದ್ದರೂ ಕೊರಳಲ್ಲಿ ರುದ್ರಾಕ್ಷಿ ಮಾಲೆ, ಹಣೆಯಲ್ಲಿ ಕುಂಕುಮ, ವಿಭೂತಿ ಹಚ್ಚಿಕೊಂಡು ಶಿವನಾಮ ಸ್ಮರಣೆಯೊಂದಿಗೆ ಇತರರಿಗೆ ಮಾದರಿಯಾಗಿದ್ದಾರೆ.

**ತೇರಿನ ವಿಶೇಷತೆ:** ನರಗುಂದ ಶ್ರೀಸಿದ್ದೇಶ್ವರ ಪಂಚಗ್ರಹ ಗುಡ್ಡದ ಹಿರೇಮಠದ ಹಿಂದಿನ ಪೀಠಾಧಿಪತಿ ಲಿಂ. ಶ್ರೀಲೀಲಾಮೂರ್ತಿ ಚನ್ನವೀರ ಶಿವಾಚಾರ್ಯ ಮಹಾಸ್ವಾಮಿಗಳು ಸರ್ವ ಧರ್ಮೀಯರ ಪ್ರೀತಿ ಪಾತ್ರರಾಗಿದ್ದರು. ಅವರ ಸಮಾಜಮುಖಿ ಧಾರ್ಮಿಕ ಕಾರ್ಯಕ್ರಮಗಳ ಸ್ಮರಣಾರ್ಥವಾಗಿ ಬಾಬುಸಾಬ ಜಮಾದಾರ ಅವರು ಶ್ರೀಮಠಕ್ಕೆ ಹೊಸ ತೇರು ನಿರ್ಮಿಸಿಕೊಡುವ ವಾಗ್ದಾನ ಮಾಡಿದ್ದರು. ನುಡಿದಂತೆ ಅವರು ಈಗ 25 ಲಕ್ಷ ರೂಪಾಯಿ ಮೊತ್ತದ ನೂತನ ರಥ ನಿರ್ಮಿಸಿಕೊಟ್ಟಿದ್ದಾರೆ. ರಥದ ಗಾಲಿಗಳು ಒಳಗೊಂಡಂತೆ 26 ಅಡಿ ಎತ್ತರದ ತೇರನ್ನು ಉತ್ತರ ಕನ್ನಡ ಜಿಲ್ಲೆ ಹೊನ್ನಾವರ ಕೆಳಗಿನ ಇಡಗುಂಜಿಯ ರಥಶಿಲ್ಪಿ ಹಾಗೂ ಇಡಗುಂಜಿ ವಿನಾಯಕ ದೇವರ ಅರ್ಚಕರು ಆಗಿರುವ ಶ್ರೀವಿದ್ವಾನ್ ವಿಷ್ಣು ಎಲ್.ಭಟ್ಟರ ಅಮೃತ ಹಸ್ತದಿಂದ ಕೆತ್ತನೆ ಮಾಡಲಾಗಿದೆ. ತೇರಿನ ಮುಂಭಾಗದಲ್ಲಿ ವಿಘ್ನನಿವಾರಕ ಮೂರ್ತಿ, ಸುತ್ತಲು ಪಂಚಗ್ರಹ ಗುಡ್ಡದ ಹಿರೇಮಠದ ಹಿಂದಿನ ನಾಲ್ವರು ಪೀಠಾಧಿಪತಿಗಳ ಭಾವಚಿತ್ರ, ಸಿಂಹಾಸನ, ಈಶ್ವರ ಲಿಂಗಗಳು, ಗಜವಂದನೆ ಹಾಗೂ ಎಂಟು ಮಂಟಪಗಳನ್ನು ಹೊಂದಿರುವ ಸುಂದರ ಕಲಾಕುಸರಿ ನೋಡುಗರನ್ನು ಆಕರ್ಷಿಸುತ್ತಿದೆ.

**ಭಾವೈಕ್ಯದ ಜತೆಗೆ ರಾಷ್ಟ್ರೀಯತೆ ಪ್ರೇಮ:** ಸುಂದರವಾದ ತೇರನ್ನು ಸಂಪೂರ್ಣ ಸಾಗುವಾನಿ, ಗೊಜ್ಜಲು ಕಟ್ಟಿಗೆಯಿಂದ ನಿರ್ಮಿಸಲಾಗಿದೆ. 15 ಅಡಿ ಎತ್ತರದ ಗಡ್ಡಿ ತೇರಿನ ಮೇಲೆ 5 ಅಡಿ ಎತ್ತರದ ಮಂಟಪ ನಿರ್ಮಿಸಿ, ಅದರ ಮೇಲ್ಭಾಗದ 5 ಅಡಿ ಎತ್ತರ ಕೇಸರಿ, ಬಿಳಿ ಮತ್ತು ಹಸಿರು ಬಣ್ಣದ ಧ್ವಜಗಳಿಂದ ಶೃಂಗರಿಸಲಾಗಿದೆ. ತೇರಿನ ಮಧ್ಯದಲ್ಲಿ ಕಳಶ ಅಳವಡಿಸಿ ಪ್ರತಿ ವರ್ಷವು ಭಾವೈಕ್ಯತೆ ಜತೆಗೆ ರಾಷ್ಟ್ರೀಯತೆಯ ಪ್ರೇಮ ಮೆರೆಯುತ್ತಿರುವುದು ಭಾರತೀಯರಿಗೆ ಹೆಮ್ಮೆ ತರಿಸಿದೆ.

ಇಮಾಮಸಾಬ ಮಹಮ್ಮದಸಾಬ ಶರಣರ ಸೇವಾ ಟ್ರಸ್ಟ್ ಹಾಗೂ ಭಕ್ತ ವರ್ಗದಿಂದ ನರಗುಂದದ ಪಂಚಗ್ರಹ ಗುಡ್ಡದ ಹಿರೇಮಠಕ್ಕೆ ಮಾ.7ರಂದು ತೇರು (ರಥ) ಸಮರ್ಪಿಸುವ ಕಾರ್ಯಕ್ರಮ ಜರುಗಲಿದೆ. ಅಂದು ಬೆಳಗ್ಗೆ 9 ಗಂಟೆಗೆ ಅರ್ಭಾಣ ಓಣಿಯ ಹಜರತ್ ಮೆಹಬೂಬಸುಭಾನಿ ದರ್ಗಾದಲ್ಲಿ 11 ವಿವಿಧ ಮಠಾಧೀಶರ ಸಮ್ಮುಖದಲ್ಲಿ ವಿಶೇಷ ಪೂಜೆ, ಧರ್ಮಸಭೆ ಜರುಗುವುದು. ಧರ್ಮಸಭೆ ಬಳಿಕ ಎಲ್ಲ 11 ಜನ ಮಠಾಧೀಶರಿಗೆ ಕಟ್ಟಿಗೆಯ ಆವಿಗೆ (ಪಾದುಕೆಗಳನ್ನು) ನೀಡಲಾಗುತ್ತದೆ. 11 ಗಂಟೆಗೆ ನಗರದ ಶಿವಾಜಿ ಸರ್ಕಲ್, ಬಸವೇಶ್ವರ ವರ್ತುಲ, ಸರ್ವಜ್ಞ ಸರ್ಕಲ್, ಗಾಂಧಿ ವರ್ತುಲದ ಮಾರ್ಗವಾಗಿ ಡೊಳ್ಳು, ಕರಡಿ ಮಜಲು, ಕೋಲಾಟ, ಜಾಂಜ್ ಮುಂತಾದ ವಾದ್ಯ ಮೇಳಗಳೊಂದಿಗೆ 501 ಮುತ್ತೈದೆಯರಿಂದ ಬೃಹತ್ ಕುಂಭಮೇಳ, ಸ್ವಾಮೀಜಿಗಳ ಪಾದಯಾತ್ರೆ ಮೆರವಣಿಗೆ ಮೂಲಕ ಶ್ರೀಮಠಕ್ಕೆ ನೂತನ ರಥ ಹಸ್ತಾಂತರದ ಧಾರ್ಮಿಕ ವಿಧಿ-ವಿಧಾನಗಳು ಜರುಗಲಿವೆ. ಆ ಬಳಿಕ ಅನ್ನ ಸಂತರ್ಪಣೆ ನೆರವೇರಿಸಲಾಗುವುದು. ಉಜ್ಜಯಿನಿ ಶ್ರೀ 1008 ಜಗದ್ಗುರು ಸಿದ್ಧಲಿಂಗ ರಾಜದೇಶಿಕೇಂದ್ರ ಶಿವಾಚಾರ್ಯ ಭಗವತ್ಪಾದಂಗಳವರ ಸಾನ್ನಿಧ್ಯದಲ್ಲಿ ಮಾ.11ರಂದು ಸಾಯಂಕಾಲ 5 ಗಂಟೆಗೆ ನಡೆಯುವ ನಮ್ಮೂರ ಶ್ರೀಸಿದ್ದೇಶ್ವರ ಜಾತ್ರೆಯ ಮೊದಲ ರಥೋತ್ಸವ ಕಣ್ತುಂಬಿಕೊಳ್ಳಲು ನರಗುಂದ ತಾಲೂಕು ಸೇರಿ ರಾಜ್ಯದ ವಿವಿಧೆಡೆಯಿಂದ ಆಗಮಿಸುವ ಸಕಲ ಸಮಾಜದ ಸದ್ಭಕ್ತರು ಉತ್ಸುಕರಾಗಿದ್ದಾರೆ.



ಇಂದಿನ ಕಾಲದಲ್ಲಿ ದುಡ್ಡು ಎಲ್ಲರಲ್ಲಿಯೂ ಇದೆ. ಆದರೆ, ಭಕ್ತಿಯ ಭಯ ಮರೆಮಾಚುತ್ತಿದೆ. ನರಗುಂದದ ಹಜರತ್ ಮೆಹಬೂಬ ಸುಭಾನಿ ದರ್ಗಾದ ಶರಣ ಬಾಬುಸಾಹೇಬ ಜಮಾದಾರ ಮುಸ್ಲಿಮರಾಗಿದ್ದರೂ ನಮ್ಮ ಶ್ರೀಮಠಕ್ಕೆ ಭಕ್ತಿಪೂರ್ವಕವಾಗಿ ಹೊಸ ತೇರು ನಿರ್ಮಿಸಿಕೊಟ್ಟಿರುವುದು ಅತ್ಯಂತ ಶ್ಲಾಘನೀಯ ಹಾಗೂ ಜಾತ್ಯಾತಿತತೆಯ ಸಂಕೇತವಾಗಿದೆ. ಶ್ರೀಮಠ ಹಾಗೂ ದರ್ಗಾದ ನಡುವಿನ ಹೊಸ ಧಾರ್ಮಿಕ ಆಚರಣೆಯ ಸಂಪ್ರದಾಯಕ್ಕೆ ಕಿಂಚಿತ್ತೂ ಧಕ್ಕೆಯಾಗದಂತೆ ಪ್ರತಿವರ್ಷ ತೇರು ಎಳೆಯುವ ಕಾರ್ಯಕ್ರಮ ಅದ್ದೂರಿಯಿಂದ ನೆರವೇರಿಸುತ್ತೇವೆ.

**– ಸಿದ್ಧಲಿಂಗ ಶಿವಾಚಾರ್ಯರು.**
ಶ್ರೀಮಠದ ಪೀಠಾಧಿಪತಿ.



ಶ್ರೀಸಿದ್ಧೇಶ್ವರ ಪಂಚಗ್ರಹ ಗುಡ್ಡದ ಹಿರೇಮಠದ ಲಿಂ. ಶ್ರೀಗಳ ಧಾರ್ಮಿಕ ಕೈಂಕರ್ಯಗಳು ಸಮಾಜದ ಪ್ರತಿಯೊಬ್ಬರೂ ಮೆಚ್ಚುವಂತದ್ದಾಗಿರುತ್ತಿತ್ತು. ಅವರಲ್ಲಿದ್ದ ಭಾವೈಕ್ಯತೆ, ಸಮಾಜಮುಖಿ ಧಾರ್ಮಿಕ ಕಳಕಳಿಯ ಸ್ಮರಣಾರ್ಥ ಶ್ರೀಮಠಕ್ಕೆ ಹೊಸ ತೇರನ್ನು ಎಲ್ಲ ಸದ್ಭಕ್ತರ ಸಹಕಾರದಿಂದ ನಿರ್ಮಿಸಿಕೊಟ್ಟಿದ್ದೇವೆ. ಇದು ಎಲ್ಲರಿಗೂ ಮಾದರಿಯಾಗಬೇಕು ಎಂಬುವುದು ನಮ್ಮ ಮುಖ್ಯ ಧ್ಯೇಯ.

**– ಶರಣ ಬಾಬುಸಾಹೇಬ ಜಮಾದಾರ.**
ದರ್ಗಾದ ಅರ್ಚಕ.

---

**ಗದಗ ರೋಟರಿ ಸೆಂಟ್ರಲ್‌ನಿಂದ ವಿಶ್ವ ಶ್ರವಣ ದಿನ, ಪುಟ್ಟರಾಜರ ಸ್ಮರಣೆ**

# ವಿಶೇಷ ಮಕ್ಕಳಿಗೆ ಸ್ಫೂರ್ತಿ ತುಂಬಿ

■ವಿಜಯಸಾಕ್ಷಿ ಸುದ್ದಿ, ಗದಗ

ಶ್ರವಣ ಎಂದರೆ ಕೇಳುವುದು, ಮನನ ಮಾಡಿಕೊಳ್ಳುವದು. ಆದರೆ ಕೆಲವು ಮುಗ್ಧ ಮಕ್ಕಳು ಬಾಲ್ಯದಲ್ಲಿಯೇ ಕೇಳುವ, ಮಾತನಾಡುವ ಸಾಮರ್ಥ್ಯ ಕಳೆದುಕೊಂಡು ಮೌನಿಗಳಾಗುತ್ತಾರೆ. ಇಂತಹ ಮಕ್ಕಳಿಗೆ ಪ್ರೇರಣೆ ಹಾಗೂ ಪ್ರೋತ್ಸಾಹ ನೀಡುವ ಮೂಲಕ ಮಕ್ಕಳಿಗೆ ಸ್ಫೂರ್ತಿ ತುಂಬಬೇಕೆಂದು ರೋಟರಿ ಕ್ಲಬ್‌ನ ಡಿಸ್ಟ್ರಿಕ್ಟ್ ಅಸಿಸ್ಟಂಟ್ ಗವರ್ನರ್ ಶರಣಬಸಪ್ಪ ಗುಡಿಮನಿ ಹೇಳಿದರು.

ಅವರು ಗದಗ ರೋಟರಿ ಸೆಂಟ್ರಲ್ ಕ್ಲಬ್‌ನಿಂದ ಗದುಗಿನ ಸ್ಪಂದನ ಕಿವುಡ ಹಾಗೂ ಮೂಕ ಮಕ್ಕಳ ಶಾಲೆಯಲ್ಲಿ ಜರುಗಿದ ವಿಶ್ವ ಶ್ರವಣ ದಿನ ಹಾಗೂ ಪಂ.ಪುಟ್ಟರಾಜ ಕವಿ ಗವಾಯಿಗಳವರ ಸ್ಮರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.



ಬಾಲ್ಯವೆಂದರೆ ಆಟಪಾಠಗಳೊಂದಿಗೆ, ಮಿತ್ರರೊಡನೆ ಕಳೆಯಬೇಕು. ಆದರೆ ಈ ಮಕ್ಕಳು ಯಾವುದೇ ತಪ್ಪು ಮಾಡದೇ ಇಂತಹ ನೋವು ಅನುಭವಿಸಬೇಕಾಗುತ್ತದೆ. ನಾವು ಇಂತಹ ಮಕ್ಕಳನ್ನು ಪ್ರೋತ್ಸಾಹಿಸಬೇಕು ಎಂದರಲ್ಲದೆ, ಲಕ್ಷ್ಮೇಶ್ವರದ ಕಿವುಡ-ಮೂಗರ ಶಾಲೆಗೆ ರೋಟರಿ ಕ್ಲಬ್ ನೀಡಿದ ದೊಡ್ಡ ಮೊತ್ತದ ಕೊಡುಗೆಯನ್ನು ಸ್ಮರಿಸಿದರು.

ಕ್ಲಬ್‌ನಿಂದ ಮಕ್ಕಳಿಗೆ ಸಿಹಿ ಹಾಗೂ ಬರವಣಿಗೆ ಸಾಮಗ್ರಿಗಳನ್ನು ವಿತರಿಸಿ ಮಾತನಾಡಿದ ಕ್ಲಬ್ ಅಧ್ಯಕ್ಷ ವಿಜಯಕುಮಾರ ಹಿರೇಮಠ, ಶ್ರವಣ ಹಾಗೂ ಮಾತಿನ ವಿಕಲತೆ ಇರುವ ಮಕ್ಕಳು ಮುದ್ದು ಬರುವಂತಿದ್ದು ಮಕ್ಕಳನ್ನು ಸ್ವಾವಲಂಬಿಗಳನ್ನಾಗಿ ಮಾಡುವಲ್ಲಿ ನಾವು ಶ್ರಮಿಸಬೇಕೆಂದರು.

ಕ್ಲಬ್ ಕಾರ್ಯದರ್ಶಿ ಸಂತೋಷ ತೋಟಗಂಟಿಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಇಂತಹ ಮಕ್ಕಳು ಸಮಾಜದಲ್ಲಿ ಪ್ರತಿನಿತ್ಯ ಕ್ಲಿಷ್ಟಕರ ಸಮಸ್ಯೆಗಳನ್ನು ಎದುರಿಸುತ್ತಾರೆ. ವೈಜ್ಞಾನಿಕವಾಗಿ ಈ ಮಕ್ಕಳಿಗೆ ಸೌಲಭ್ಯ ಒದಗಿಸುವ ಕಾರ್ಯ ನಡೆಯಬೇಕಿದೆ ಎಂದರು.

ದೀಪಾ ಮಸಾಳೆ, ಪೂಜಾ ದೊಡ್ಡಮನಿ ಪ್ರಾರ್ಥಿಸಿದರು. ಕವಿತಾ ದಂಡಿನ ಸ್ವಾಗತಿಸಿದರು. ಮುಖ್ಯೋಪಾಧ್ಯಾಯೆ ಲಲಿತಾ ಪಾಟೀಲ ಪರಿಚಯಿಸಿದರು. ಶಾಂತಾ ಗದಗ ನಿರೂಪಿಸಿದರು. ಕೊನೆಗೆ ಚಂದ್ರಮ್ಮ ಕೊಟಗಿ ವಂದಿಸಿದರು.

ವೇದಿಕೆಯ ಮೇಲೆ ಎಸ್.ಎಫ್. ದ್ಯಾಪನಗೌಡ್ರ, ಸೋಮಶೇಖರ ಚಿಕ್ಕಮಠ, ವಿದ್ಯಾಶ್ರೀ ಪೂಜಾರ, ಸವಿತಾ ಗಚ್ಚಮ್ಮನವರ, ಪ್ರಭಾವತಿ ಮೆಣಸಿನಕಾಯಿ, ಶಿವಲೀಲಾ ಶೇಗಣಿ, ರೇಣುಕಾ ಗಡಗಿ, ಮಲ್ಲಮ್ಮ ಪಾಟೀಲ, ನಿರಂಜನ ಸಂಪಣ್ಣವರ, ರವೀಂದ್ರ ಮೊರಬದ ಉಪಸ್ಥಿತರಿದ್ದರು.

---

# ಮಕ್ಕಳಿಂದ ವಿಜ್ಞಾನ ಮಾದರಿ, ನಕ್ಷೆಗಳ ಪ್ರದರ್ಶನ



■ವಿಜಯಸಾಕ್ಷಿ ಸುದ್ದಿ, ರೋಣ

ಹೊಳೆ ಮಣ್ಣೂರು ಗ್ರಾ.ಪಂ ಗ್ರಂಥಾಲಯ ಹಾಗೂ ಮಾಹಿತಿ ಕೇಂದ್ರದ ವತಿಯಿಂದ ರಾಷ್ಟ್ರೀಯ ವಿಜ್ಞಾನ ದಿನಾಚರಣೆಯ ನಿಮಿತ್ತ ಮಕ್ಕಳಿಂದ ತಯಾರಿಸಿದ ವಿಜ್ಞಾನ ಮಾದರಿಗಳು ಹಾಗೂ ನಕ್ಷೆಗಳ ಪ್ರದರ್ಶನ ಕಾರ್ಯಕ್ರಮ ಆಯೋಜಿಸಲಾಗಿತ್ತು.

ಗ್ರಾ.ಪಂ ಅಧ್ಯಕ್ಷೆ ಸುಜಾತಾ ಮಲ್ಲಯ್ಯ ಮಠಪತಿ ಕಾರ್ಯಕ್ರಮ ಉದ್ಘಾಟಿಸಿದರು. ಗ್ರಾ.ಪಂ ವ್ಯಾಪ್ತಿಯ ಪ್ರಾಥಮಿಕ ಹಾಗೂ ಪ್ರೌಢಶಾಲೆ ವಿದ್ಯಾರ್ಥಿಗಳು ವಿಜ್ಞಾನ ಹಾಗೂ ಸಮಾಜ ವಿಜ್ಞಾನ ಶಿಕ್ಷಕರ ಮಾರ್ಗದರ್ಶನದಲ್ಲಿ ವಿವಿಧ ಪರಿಕಲ್ಪನೆಯಲ್ಲಿ ವಿಜ್ಞಾನ ಮಾದರಿಗಳನ್ನು ಯಾವುದೇ ವೆಚ್ಚವಿಲ್ಲದೆ ಅಥವಾ ಕಡಿಮೆ ವೆಚ್ಚದ ವಸ್ತುಗಳನ್ನು ಬಳಕೆ ಮಾಡಿಕೊಂಡು ತಯಾರಿಸಿದ್ದರು. ಆ ಬಗ್ಗೆ ಪ್ರದರ್ಶನದಲ್ಲಿ ಸಭಿಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ವಿವರವಾದ ಮಾಹಿತಿಯನ್ನು ಮಕ್ಕಳು ನೀಡಿದರು.

ಗಾಳಿಪಟ ತಯಾರಿಸಿ ಹಾರಿಸುವ ಸ್ಪರ್ಧೆಯಲ್ಲಿ ಸ್ಥಾನ ಪಡೆದ ತರಗತಿವಾರು 27 ವಿದ್ಯಾರ್ಥಿಗಳಿಗೆ ಹಾಗೂ ಗಣಿತ ಪರೀಕ್ಷೆಯಲ್ಲಿ ಸ್ಥಾನ ಪಡೆದ 24 ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು. ಕಾರ್ಯಕ್ರಮವನ್ನು ಅಚ್ಚುಕಟ್ಟಾಗಿ ಏರ್ಪಡಿಸಿದ ಬಸವರಾಜ ಗಾಣಿಗೇರ ಹಾಗೂ ಗ್ರಾಮ ಪಂಚಾಯಿತಿಯ ಕಾರ್ಯಶೈಲಿಯ ಬಗ್ಗೆ ಗ್ರಾ.ಪಂ ಅಧ್ಯಕ್ಷರು ಹಾಗೂ ಆಡಳಿತ ಮಂಡಳಿಯವರು ಮೆಚ್ಚುಗೆ ವ್ಯಕ್ತಪಡಿಸಿದರು.

---

**ವಿನೋದ ಅಸೂಟಿಗೆ ಕ್ರೀಡಾ ಪ್ರಾಧಿಕಾರ ಉಪಾಧ್ಯಕ್ಷ ಸ್ಥಾನ**

# ನವಲಗುಂದ ಕ್ಷೇತ್ರದ ಜನರಿಗೆ ಸಿಕ್ಕ ಗೌರವ

■ವಿಜಯಸಾಕ್ಷಿ ಸುದ್ದಿ, ನವಲಗುಂದ

ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷರಾಗಿ ನೇಮಕಗೊಂಡ ಧಾರವಾಡ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ವಿನೋದ ಅಸೂಟಿ, ಸೋಮವಾರ ಅಧಿಕಾರ ಸ್ವೀಕರಿಸಿದರು. ಬೆಂಗಳೂರಿನ ಕಂಠೀರವ ಕ್ರೀಡಾಂಗಣದಲ್ಲಿರುವ ಕಚೇರಿಯಲ್ಲಿ ಅಧಿಕಾರ ಸ್ವೀಕರಿಸಿದ ವಿನೋದ ಅಸೂಟಿ, ತಮ್ಮ ಕಚೇರಿಯನ್ನು, ನವಲಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ವರ್ಧಮಾನಗೌಡ ಹಿರೇಗೌಡರ, ಅಣ್ಣಿಗೇರಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಮಂಜುನಾಥ ಮಾಯಣ್ಣವರ ಅವರ ಕಡೆಯಿಂದ ಉದ್ಘಾಟನೆ ಮಾಡಿಸಿ, ಮೆಚ್ಚುಗೆ ಗಳಿಸಿದರು.



ನೆಚ್ಚಿನ ಯುವ ನಾಯಕನ ಅಧಿಕಾರ ಸ್ವೀಕಾರ ಸಮಾರಂಭಕ್ಕೆ ಸಾಕ್ಷಿಯಾಗಲು ನವಲಗುಂದ ವಿಧಾನಸಭಾ ಕ್ಷೇತ್ರದ ಜನ, ಸ್ವಯಂ ಪ್ರೇರಿತರಾಗಿ ಆಗಮಿಸಿದ್ದರು.

ಇದೇ ಸಂದರ್ಭದಲ್ಲಿ, ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಗೆ, ಹಿರಿಯರಿಗೆ ಶಾಲು ಹೊದಿಸಿ, ಗೌರವಿಸಿದ ವಿನೋದ ಅಸೂಟಿ ಮಾದರಿಯಾದರು. ರಾಜ್ಯ ಯುವ ಕಾಂಗ್ರೆಸ್ ಅಧ್ಯಕ್ಷ ಮೊಹಮ್ಮದ್ ನಲಪಾಡ, ಹಾನಗಲ್ ಶಾಸಕ ಶ್ರೀನಿವಾಸ ಮಾನೆ, ನವಲಗುಂದ ಶಾಸಕ ಎನ್. ಎಚ್. ಕೋನರೆಡ್ಡಿ, ಸೇರಿದಂತೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು, ಅಧಿಕಾರ ಸ್ವೀಕಾರ ಸಮಾರಂಭದಲ್ಲಿ ಭಾಗವಹಿಸಿ, ವಿನೋದ ಅವರಿಗೆ ಶುಭ ಹಾರೈಸಿದರು.

ಇದು ನನಗೆ ಸಿಕ್ಕ ಗೌರವ ಅಲ್ಲ, ಇದು ನವಲಗುಂದ ತಾಲೂಕಿನ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರಿಗೆ ಸಿಕ್ಕ ಗೌರವವಾಗಿದ್ದು, ಇದನ್ನು ನಾನು ನನ್ನ ಪಕ್ಷದ ಕಾರ್ಯಕರ್ತರಿಗೆ ಸಮರ್ಪಣೆ ಮಾಡುತ್ತಿದ್ದೇನೆ ಎಂದು ಅಸೂಟಿ ಹೇಳಿದರು.

ಕರ್ನಾಟಕ ಕ್ರೀಡಾ ಪ್ರಾಧಿಕಾರದ ಉಪಾಧ್ಯಕ್ಷ ಸ್ಥಾನಕ್ಕೆ ಆಯ್ಕೆ ಮಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ ಅವರಿಗೆ ವಿನೋದ ಅಸೂಟಿ ಧನ್ಯವಾದ ಸಮರ್ಪಿಸಿದರು. ನವಲಗುಂದ ವಿಧಾನಸಭಾ ಕ್ಷೇತ್ರದಿಂದ ಬಂದಿದ್ದ ಜನರು, ವಿನೋದ ಅಸೂಟಿಯವರಿಗೆ ಸನ್ಮಾನಿಸಿ, ಬೆನ್ನು ತಟ್ಟಿದರು.

---

# ನಾಳೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ಸಮಾರಂಭ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ ನಗರದ ಕೆ.ಎಚ್.ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಮಾರ್ಚ್ 7 ರಂದು ಬೆಳಿಗ್ಗೆ 10 ಗಂಟೆಗೆ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆ ನಿಮಿತ್ತ ಕ್ರೀಡಾಕೂಟಗಳನ್ನು ಹಮ್ಮಿಕೊಳ್ಳಲಾಗಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಪರಿಶಿಷ್ಟ ವರ್ಗಗಳ ಕಲ್ಯಾಣ ಸಚಿವರಾದ ಬಿ.ನಾಗೇಂದ್ರ ಅವರು ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ.

ರಾಜ್ಯ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಚ್.ಕೆ.ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ರಾಜ್ಯ ಖನಿಜ ನಿಗಮದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್.ಪಾಟೀಲ, ಸಂಸದರುಗಳಾದ ಶಿವಕುಮಾರ ಉದಾಸಿ, ಪಿ.ಸಿ.ಗದ್ದಿಗೌಡರ, ವಿಧಾನಪರಿಷತ್ ಸದಸ್ಯರುಗಳಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ.ಪಾಟೀಲ, ಶಿರಹಟ್ಟಿ ಶಾಸಕ ಡಾ.ಚಂದ್ರು ಲಮಾಣಿ, ನಗರಸಭೆ ಅಧ್ಯಕ್ಷೆ ಉಷಾ ದಾಸರ, ಉಪಾಧ್ಯಕ್ಷೆ ಸುನಂದಾ ಬಾಕಳೆ ಆಗಮಿಸುವರು.

ವಿಶೇಷ ಆಹ್ವಾನಿತರಾಗಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ಎಸ್. ಮಂಜುನಾಥ್, ವಾಣಿಜ್ಯ ತೆರಿಗೆ ಆಯುಕ್ತರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಸಿ.ಶಿಖಾ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಆಯುಕ್ತರಾದ ಎನ್ ಶಶಿಕುಮಾರ್, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್.ನೇಮಗೌಡ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಡಾ.ಶರಣು ಗೋಗೇರಿ ಸ್ವಾಗತ ಕೋರಿದ್ದಾರೆ.

---

# ಲೋಕಾಯುಕ್ತ ಜನ ಸಂಪರ್ಕ ಸಭೆ

■ವಿಜಯಸಾಕ್ಷಿ ಸುದ್ದಿ, ಗದಗ

ಲಕ್ಷ್ಮೇಶ್ವರ ಪುರಸಭೆ ಕಾರ್ಯಾಲಯದಲ್ಲಿ ಮಾರ್ಚ್ 13ಬುಧವಾರದಂದು ಬೆಳಿಗ್ಗೆ 10:30 ಗಂಟೆಯಿಂದ 1 ಗಂಟೆಯವರಿಗೆ ಲೋಕಾಯುಕ್ತ ಜನ ಸಂಪರ್ಕ ಸಭೆ ಮತ್ತು ಸಾರ್ವಜನಿಕರಿಂದ ಅಹವಾಲು ಸ್ವೀಕಾರ ಕಾರ್ಯಕ್ರಮ ಜರುಗಲಿದೆ. ಸದರಿ ದಿನದಂದು ಸಾರ್ವಜನಿಕರಿಂದ ದೂರು ಅಥವಾ ಅಹವಾಲುಗಳನ್ನು ಸ್ವೀಕರಿಸಲಾಗುವುದು ಎಂದು ಗದಗ ಕರ್ನಾಟಕ ಲೋಕಾಯುಕ್ತ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka